


# ಸಿಹಿ ಕಹಿ

ಕನ್ನಡ ದಿನಪತ್ರಿಕೆ, ಬಾಗಲಕೋಟೆ

ಬಾಗಲಕೋಟೆಯಿಂದ ಪ್ರಕಟಿತ

RNI REG No. : KARKAN/2016/75068

SIHI KAHI

KANNADA DAILY MORNING

BAGALKOT



ಸಂಪಾದಕರು : ಮಾರುತಿ ಬಸವಂತಪ್ಪ ಹೊಸಮನಿ

Editor: MARUTIBASAVANTAPPAHOSAMANI

Cell : +91 9741319119



Volume : 06 Issue : 285 Tuesday 23-07-2024 E-mail : maruti.b.hosamani76@gmail.com Page: 4 Price : Rs. 1/-


## ನಿಜ ಸುಖಿ ಶರಣರಾದ ಹಡಪದ ಅಪ್ಪಣ್ಣನವರ ವಿಚಾರಗಳು ಸಮಾಜಕ್ಕೆ ಬೇಕು: ತಹಶೀಲ್ದಾರ್ ರೇಣುಕಾ



**ಕೂಡ್ಲಿಗಿ :** ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಕೂಡ್ಲಿಗಿ ಪಟ್ಟಣದ ತಾಲೂಕಾ ಕಚೇರಿಯಲ್ಲಿ ಹಡಪದ ಅಪ್ಪಣ್ಣನವರ ಜಯಂತಿಯನ್ನು ಆಚರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ತಾಲೂಕು ಮಟ್ಟದ ಅಧಿಕಾರಿಗಳು ಗೈರ್ ಹಾಜರಾಗಿರುವುದಕ್ಕೆ ಫೋನ್ ಕರೆ ಮೂಲಕ ಅಧಿಕಾರಿಗಳಿಗೆ ಸೂಚನೆ ನೋಟಿಸ್ ನೀಡುವುದಾಗಿ ತರಾಟೆ ತೆಗೆದು ಕೊಂಡರು.

ಭಾನುವಾರ ರಂದು ಮಹಾ ಶರಣರಲ್ಲಿ ಒಬ್ಬರಾದ ಹಡಪದಅಪ್ಪಣ್ಣನವರು12ನೇ.ಶತಮಾನದಬಸವಾದಿ ಶರಣರ ಒಡನಾಡಿಯಾಗಿ ಬಾಳಿದ ಶರಣ ಹಡಪದ ಅಪ್ಪಣ್ಣನವರು ಇವರು ಬಸವಣ್ಣನವರ ಘನತೆಯನ್ನು ತಿಳಿದು ಕಾಯ, ವಾಚ, ಮನಸ್ಸಿನಿಂದ ಸೇವೆ ಮಾಡುವ ಬಸವಣ್ಣನವರನ್ನು ಅರಿತ ಅಪ್ಪಣ್ಣನವರು ಅನುಭವ ಮಂಟಪದಲ್ಲಿ ಆಪ್ತ ಕಾರ್ಯದರ್ಶಿಯಾಗಿದ್ದರು. ಇವರ ಹುಟ್ಟೂರಾದ ಕರ್ನಾಟಕದ ವಿಜಾಯಪುರ ಜಿಲ್ಲೆಯ ಬಸವನ ಬಾಗೇವಾಡಿ ತಾಲೂಕಿನ ಮಸಬಿನಾಳ ಗ್ರಾಮದ ಚನ್ನವೀರಪ್ಪ ದೇವಕಮ್ಮನ ಮಗ ಹಡಪದ ಅಪ್ಪಣ್ಣನವರು ಜನಿಸಿದರು.

ಇವರನ್ನು ಬಸವಣ್ಣನ ಕೊನೆಯ ಕಾಲದವರೆಗೂ ಒಡನಾಡಿಯಾಗಿ ಆಪ್ತ ಸೇವಕನಾಗಿ ಹಡಪದ ಅಪ್ಪಣ್ಣನನ್ನು "ನಿಜ ಸುಖಿ ಅಪ್ಪಣ್ಣ" ಎಂದು ಶರಣರೆಲ್ಲರೂ ಕರೆಯುತ್ತಿದ್ದರು. ಇವರು ಕ್ಷೌರಿಕ ವೃತ್ತಿ ಮಾಡುತ್ತಿದ್ದವರೆಲ್ಲ ಹಡಪದ ಅಪ್ಪಣ್ಣನವರನ್ನು 'ನಮ್ಮ ಮೂಲ ಪುರುಷನೆಂದು' ಹೇಳುತ್ತಾರೆ, ಹಾಗೆ ಶೋಷಿತ ವರ್ಗಗಳಿಗೆ ಚಾಟಿ ಏಟಿನಂತೆ ಅನೇಕ ವಚನಗಳನ್ನು ರಚಿಸಿರುವುದು ಉಂಟು,

ಹಡಪದ ಅಪ್ಪಣ್ಣನವರು ಆಚಾರ ವಿಚಾರಗಳು ವೈರಾಗ್ಯವಾಗಿದ್ದವು. ಅನೇಕ ವಚನಗಳನ್ನು ರಚಿಸಿದ್ದು ಉಂಟು ಮಾನ್ಯ ತಹಶೀಲ್ದಾರ್ ರೇಣುಕಮ್ಮ ಇವರು ಶಿವ ಶರಣರ ವಚನಕಾರರ ಮಹಾನ್ ಸಮಾಜ ಸೇವಕರ ಜಯಂತಿಗಳನ್ನು ಸರ್ಕಾರದ ಆದೇಶದಂತೆ ಪ್ರತಿಯೊಬ್ಬರಿಗೂ ಇಂಥಹ ಮಹಾನ್ ಶರಣರ ಜಯಂತಿ ಸಾರ್ವಜನಿಕರಿಗೂ ಆದರ್ಶ ಮಾರ್ಗ ಗಳಾಗಿರಬೇಕು ಈಗಿನ ನಾಗರಿಕತೆಗೆ ಬೇಕು ಎಂದು ತಿಳಿಸಿದರು, ಈ ಸಂದರ್ಭದಲ್ಲಿ ಹಡಪ ಸಮುದಾಯದ ಮುಖಂಡರಾದ ಹಾರ್ಕಬಾವಿ ಕೊಟ್ರೇಶ್ ರವರು ಹಡಪದ ಅಪ್ಪಣ್ಣನವರ ಬಗ್ಗೆ ಮಾತನಾಡಿದರು. ಈ ಸಂದರ್ಭದಲ್ಲಿ ಗೌರವಾಧ್ಯಕ್ಷರಾದ ಮಲ ಸಿದ್ದಪ್ಪ, ತಾಲೂಕು ಅಧ್ಯಕ್ಷರಾದ ಚೌಡಪ್ಪ ತಿಪ್ಪೇಸ್ವಾಮಿ, ಹಾರ್ಪಾಲ್ ಕರಿಯಪ್ಪ ಆರ್ ಫೈವ್ ಗ್ರಾಮ ಪಂಚಾಯತಿ ಸದಸ್ಯರಾದ ಲಕ್ಷ್ಮಿ ಕೊಟ್ರೇಶ್, ರಾಜೇಶ್ವರಿ ಮಂಜುನಾಥ್, ಜಿಲ್ಲಾ ಸಂಘಟನೆ ಕಾರ್ಯದರ್ಶಿ ಎಚ್ ಕೊಟ್ರೇಶ್, ಶಿವರಾಜ್ ಇನ್ನು ಮುಂತಾದವರು ಭಾಗವಹಿಸಿದ್ದರು.

**ಜಿಲ್ಲಾ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ರಾಘವೇಂದ್ರ ಬಿ. ಸಾಲುಮನೆ ಕೂಡ್ಲಿಗಿ.**

## ವಿಕಲ ಚೇತನ ಮಂಜುನಾಥ್ ಇವರಿಗೆ ಶಾಸಕರಿಂದ ಅಭಿನಂದನೆ

**ಹಿರೇ ಹೆಗ್ಡಾಳ್ :** ವಿಜಯನಗರ ಜಿಲ್ಲೆಯ ಕೂಡ್ಲಿಗಿ ತಾಲೂಕಿನ ಹಿರೇ ಹೆಗ್ಡಾಳ್ ಗ್ರಾಮದ ಕೆ.ಎನ್.ಮಂಜುನಾಥ ತಾಯಿ ವಿಜಯಲಕ್ಷ್ಮಿ ಇವರು ವಿಶೇಷ ಏನೆಂದರೆ ವೀಲ್ ಚೇರ್ ಬಾಸ್ಕೆಟ್ ಬಾಲ್ ಪುರುಷ ಆಟಗಾರರ ರಾಜ್ಯ ಮಟ್ಟದ ತಂಡ-ಕ್ಕೆ ತಾಲೂಕಿನ ಹಿರೇ ಹೆಗ್ಡಾಳ್ ಗ್ರಾಮದ ಮಂಜುನಾಥ್ ಇವರು ಆಯ್ಕೆಯಾಗಿದ್ದಾ-ರೆ. ತಮಿಳುನಾಡಿನಲ್ಲಿ ಜುಲೈ 25 ರಂದು ನಡೆಯುವ ಸೌತ್ ಜೂನ್ ಚಾಂಪಿಯನ್ ಶಿಪ್ ಎರಡನೇ ಬಾರಿ ಕ್ರೀಡಾ ಕೂಟದಲ್ಲಿ ರಾಜ್ಯ ವಿಶೇಷ ಚೇತನರ ಹತ್ತು ಆಟಗಾರರು ತಂಡವನ್ನು ಸ್ಟೇಟ್ ವಿಲ್ ಶೇರ್ ಬಾಸ್ಕೆಟ್ ಬಾಲ್ ಅಸೋಸಿಯೇಷನ್ ಪ್ರಕಟಿಸಿದ್ದು. ಹತ್ತು ಆಟಗಾರರ ಪೈಕಿ ಗ್ರಾಮದ ವಿಶೇಷ ಚೇತನ ಮಂಜುನಾಥ್ ಆಯ್ಕೆಯಾಗಿದ್ದಾರೆ. ಕೆ.ಎನ್.ಮಂಜುನಾಥ್ ಇವರಿಗೆ ಸಾಕಷ್ಟು



ಪ್ರಶಸ್ತಿಗಳು ಲಭಿಸಿದ್ದು ಕರಿಬಸವೇಶ್ವರ ಯುವ ಕಲಾ ಸಂಘದ ವತಿಯಿಂದ ಕ್ರೀಡೆ ಪ್ರಶಸ್ತಿ ಕಲಾ ಭಾರತಿ ಕಲಾ ಸಂಘದ ವತಿಯಿಂದ ಕ್ರೀಡೋತ್ಸವ ರಾಜ್ಯ ಪ್ರಶಸ್ತಿ ಹಾಗೂ ಇನ್ನೂ ಇತರ ಸಂಘ ಸಂಸ್ಥೆಗಳಿಂದ ಪ್ರಶಸ್ತಿಯನ್ನು ತೆಗೆದು ಕೊಂಡಿರುವ ವೀಲ್ ಚೇರ್ ಆಟಗಾರರಾಗಿರುವ ಹೆಮ್ಮೆಯ ವಿಕಲ ಚೇತನ ಮಂಜುನಾಥ್ ಇವರಿಗೆ ಕೂಡ್ಲಿಗಿ ವಿಧಾನಸ ಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಡಾ, ಎನ್.ಟಿ. ಶ್ರೀನಿವಾಸ್ ಇವರಿಂದ ಅಭಿನಂದಿಸಿ ಧನ ಸಹಾಯ ಮಾಡಲಾಯಿತು ಈ ಸಂದರ್ಭದಲ್ಲಿ ಶಾಸಕರು ಮಾತನಾಡಿದರು. ಇಂಥ ಹೊಸ ಹೊಸ ಪ್ರತಿಭೆಗಳು ನಮ್ಮ ಕೂಡ್ಲಿಗಿಯಲ್ಲಿ ಅತಿ ಹೆಚ್ಚಾಗಿ ಹೊರ ಹೊಮ್ಮಲಿ ನನ್ನ ಆಸೆ ಒಂದೇ ಕೂಡ್ಲಿಗಿಯನ್ನು ಒಂದು ಸುಂದರ ಶಾಂತಿಯ ತೋಟ ಮಾಡುವುದು ಪ್ರತಿಭೆಯನ್ನು ಗುರುತಿಸುವುದು ಅವರಿಗೆ ಸಹಕಾರ ನೀಡುವುದು ನನ್ನ ಉದ್ದೇಶ ಎಂದರು. ಈ ಸಂದರ್ಭದಲ್ಲಿ ನೌಕರ ಘಟಕದ ಅಧ್ಯಕ್ಷರಾದ ಪಾಲ್ತೂರ್ ಸಿದ್ದರಾಧ್ಯ ಶಿಕ್ಷಕರು ನಾಗರಾಜ್ ಕೊಟ್ರಪ್ಪನವರು ಹಿರೇ ಹೆಗ್ಡಾಳ್ ಶಾಲೆಯ ಶಿಕ್ಷಕರು ಬಣಕಾರ್ ನಾಗರಾಜ್ ಗೋವಿಂದ ಗಿರಿ ಶಿಕ್ಷಕಿಯಾದ ವಿಜಯಲಕ್ಷ್ಮಿ ಹಾಗೂ ಸಮಾಜ ಸೇವಕರು ಕಾವಲಿ ಶಿವಪ್ಪ ನಾಯಕ ದಿನಕರ ಶಾಸಕರ ಆಪ್ತರಾದ ಮರಳು ಸಿದ್ದಪ್ಪ ದಿಬ್ಬದಳ್ಳಿ ಸಿದ್ದೇಶ್ ಹಾಗೂ ಇತರರು ಉಪಸ್ಥಿತರಿದ್ದರು.

**ಹೋಬಳಿ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್: ಕೆ.ಎಸ್.ವೀರೇಶ್. ಕೆ. ಹೊಸಹಳ್ಳಿ.**

## ರೈತರಿಗೆ ಬೆಳೆ ವಿಮೆ ಸಮೀಕ್ಷೆ ಬಗ್ಗೆ ಮಾಹಿತಿ ನೀಡಿದ ಕೃಷಿ ಅಧಿಕಾರಿ ಎಚ್.ಕೆ. ಪಾಟೀಲ

**ದೇವರ ಹಿಪ್ಪರಗಿ :** ರೈತರು ಬಿತ್ತನೆ ಮಾಡಿದ ಮುಂಗಾರು ಹಂಗಾಮಿನ ಬೆಳೆ ವಿಮೆ ಹಾಗೂ ಬೆಳೆ ಸಮೀಕ್ಷೆ ಬಗ್ಗೆ ಬೆಳೆ ವಿಮೆ ಒಂದು ಎಕರೆ ಎಷ್ಟು ಹಣ ಕಟ್ಟಿದ್ದಾರೆ ಎಷ್ಟು ವಿಮೆ ಹಣ ಬರುತ್ತದೆ, ಹಾಗೂ ಬೆಳೆ ಸಮೀಕ್ಷೆ ಯಾವ ರೀತಿ ಮಾಡಬೇಕು ಎಂದು ಸವಿಸ್ತಾರವಾಗಿ ರೈತರಿಗೆ ಮಾಹಿತಿ ನೀಡಿದ ದೇವರ ಹಿಪ್ಪರಗಿ ಕೃಷಿ ಅಧಿಕಾರಿಗಳಾದ ಎಚ್ ಕೆ ಪಾಟೀಲ, ತಿಳಿಸಿದರು,

ತಾಲೂಕಿನ ಯಲಗೋಡ ಗ್ರಾಮದಲ್ಲಿನ ರೈತರಿಗೆ ಮುಂಗಾರು ಹಂಗಾಮಿನ ಬೆಳೆ ವಿಮೆ ಹಾಗೂ ಬೆಳೆ ಸಮೀಕ್ಷೆ ಬಗ್ಗೆ ಮಾಹಿತಿ ನೀಡಿದರು, ಈ ಸಂದರ್ಭದಲ್ಲಿ ಸಾಯಬಣ್ಣ, ಬಾಗೇವಾಡಿ, ಶಿವಶಂಕರ ಬೂದಿಹಾಳ, ಸೋಮಶೇಖರ, ಹೋಸಮನಿ, ನೀಲಪ್ಪಹಡಪದ, ರೈತರಾದ, ತಿಪ್ಪಣ್ಣ ಗಾಣಿಗೇರ, ಮುರಗೇಪ್ಪ ದೊಡ್ಡಮನಿ, ಶೇಖಪ್ಪ ಕೆಂಭಾವಿ ಮಶೇಖಸಾಬ ಬಾಗವಾನ, ಬಸವರಾಜ ನಾಟಿಕಾರ, ಹಾಗೂ ಇನ್ನೂ ಹಲವಾರು ರೈತರು ಈ ಕಾರ್ಯಕ್ರಮ ದಲ್ಲಿ ಉಪಸ್ಥಿತರಿದ್ದರು.

**ತಾಲೂಕ ವರದಿಗಾರರು, ಸಿಹಿ ಕಹಿ ಕನ್ನಡ ದಿನ ಪತ್ರಿಕೆ ಹಾಗೂ ಎಸ್.ಕೆ ನ್ಯೂಸ್ ಕನ್ನಡ ಚಾನಲ್:ಭೀಮಪ್ಪ ಹಚ್ಯಾಳ. ದೇವರ ಹಿಪ್ಪರಗಿ.**



## ಪರಿಶಿಷ್ಟ ವರ್ಗ ಪರಿಶಿಷ್ಟ ಪಂಗಡದವರಿಗೆ ಮೀಸಲಿಟ್ಟ ಅನುದಾನ ಗ್ಯಾರಂಟಿಗೆ ಬಳಸಿದ್ದನ್ನು ಒಪ್ಪಲಾಗದು: ವೆಲ್ಫೇರ್ ಪಾರ್ಟಿ

**ಬೆಂಗಳೂರು :** ಪರಿಶಿಷ್ಟ ಅಭಿವೃದ್ಧಿ ಅಭ್ಯುದಯಕ್ಕೆ ಮೀಸಲಿಟ್ಟ ಅನುದಾನವನ್ನು ರಾಜ್ಯ ಸರ್ಕಾರವು ಗ್ಯಾರಂಟಿ ಮತ್ತು ಇತರ ಉದ್ದೇಶಗಳಿಗಾಗಿ ಬಳಸಿರುವ ಸರ್ಕಾರದ ನಡೆ ಖಂಡನಾರ್ಹ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಇದರ ಕರ್ನಾಟಕ ರಾಜ್ಯ ಅಧ್ಯಕ್ಷ ಅಡ್ವಕೇಟ್ ತಾಹೇರ್ ಹುಸೇನ್ ಹೇಳಿದ್ದಾರೆ.

ಅವರು ಮಾತನಾಡುತ್ತಾ, ಶೋಷಿತ ನಿರ್ಲಕ್ಷ್ಯಿತ ಸಮುದಾಯಗಳನ್ನು ಮೇಲಕ್ಕೆತ್ತಿ ಅಭಿವೃದ್ಧಿ ಪಥಕ್ಕೆ ತಂದು ಸಮಾಜದ ಮುಖ್ಯ ವಾಹಿನಿಗೆ ತರುವ ಪ್ರಯತ್ನ ವಾಗಿ ಮಾಡಿದ ಕಾಯ್ದೆಯನ್ನು ಸರಕಾರ ದುರುಪಯೋಗ ಪಡಿಸಿದೆ. ಈ ಬಗೆಗಿನ ಸಮಗ್ರ ಮಾಹಿತಿಗಳನ್ನು ಮಾಧ್ಯಮ ಗಳು ಬಹಿರಂಗಪಡಿಸುತ್ತಿವೆ. 2023/24 ಸಾಲಿನ ಎಸ್‌ಸಿ ಎಸ್ ಪಿ,ಟಿ ಎಸ್ ಪಿ ಅನುದಾನ ಹಂಚಿಕೆಯಲ್ಲಿ ಗ್ಯಾರಂಟಿ ಅನುಷ್ಠಾನಕ್ಕೆ11,114 ಕೋಟಿ ರೂಪಾಯಿ ವರ್ಗಾಯಿಸಿದ್ದನ್ನು ಸರಕಾರವೇ ಸಮರ್ಥಿಸಿಕೊಂಡಿದೆ. ಪ್ರಸಕ್ತ ಸಾಲಿನಲ್ಲಿ ಗ್ಯಾರಂಟಿ ಗಳಿಗೆ 14,282.38 ಕೋಟಿ ರೂಪಾಯಿ ಹಂಚಿಕೆ ಮಾಡಿದೆ.

ಎಸ್ ಎಸ್ ಪಿ , ಟಿ.ಎಸ್ ಪಿ 2014/15 ರಿಂದ 2023/24 ರ ವರೆಗಿನ ಅಂಕಿ ಅಂಶಗಳ ಪ್ರಕಾರ ನಿಗದಿಪಡಿಸಿದ ಅನುದಾನ 2.56ಲಕ್ಷ ಕೋಟಿ ರೂಪಾಯಿ, ಬಿಡುಗಡೆ ಯಾದ ಅನುದಾನ 2.47 ಲಕ್ಷ ಕೋಟಿ, ವೆಚ್ಚವಾದ ಅನುದಾನ 2.41 ಲಕ್ಷ ಕೋಟಿ ರೂಪಾಯಿ (94.22%) ಯಾಗಿದೆ. ಕಳೆದೆರಡು ವರ್ಷ ಗಳಿಂದ ಗ್ಯಾರಂಟಿ ಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅನುದಾನವನ್ನು ಗ್ಯಾರಂಟಿಗೆ ಬಳಸಲಾಗಿದೆ. ಪರಿಶಿಷ್ಟರ ಅಭಿವೃದ್ಧಿಗೆ ರಾಜ್ಯ ಸರ್ಕಾರ ಮೀಸಲಿಟ್ಟ ಅನುದಾನ ಸಮರ್ಪಕವಾಗಿ ಆ ಸಮುದಾಯಕ್ಕೆ ತಲುಪುತ್ತಿಲ್ಲ ಎಂಬ ಆರೋಪವು ಕೇಳಿ ಬರುತ್ತಿದೆ. ಈ ರೀತಿಯಲ್ಲಿ ಸರ್ಕಾರ ಪರಿಶಿಷ್ಟರ ನಿಧಿಗೆ ಕನ್ನ ಹಾಕಿರುವುದು ಸರಿಯಲ್ಲ ಎಂದು ಅವರು ಹೇಳಿದರು.

## ಮೀಸಲಿದ್ದ ಅನುದಾನ ಬೇರೆ ಯೋಜನೆಗಳಿಗೆ ಉಪಯೋಗಿಸುತ್ತಿರುವುದು ಖಂಡನೀಯ: ಮುತ್ತು ಚಲವಾದಿ



**ಮುದ್ದೇಬಿಹಾಳ :** ಸರ್ಕಾರದ ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿದ SC TSP ಅನುದಾನವನ್ನು ಹಿಂದಿರುಗಿಸಲು ಹಾಗೂ ಪರಿಶಿಷ್ಟ ಜಾತಿಯ ಮಕ್ಕಳಿಗೆ ನೀಡಲಾಗುತ್ತಿದ್ದ ಪ್ರೋತ್ಸಾಹಧನವನ್ನು ಯಥಾವತ್ತಾಗಿ ಮುಂದುವರಿಸಲು ದಲಿತ ವಿದ್ಯಾರ್ಥಿ ಪರಿಷತ್ ತಾಲೂಕು ಅಧ್ಯಕ್ಷರಾದ ಮುತ್ತು ಚಲವಾದಿ ನೇಬಗೇರಿ ಸರ್ಕಾರಕ್ಕೆ ಒತ್ತಾಯಿಸಿದರು.

ದಲಿತರ ಅಭಿವೃದ್ಧಿ ನಮ್ಮಿಂದ ಸಾಧ್ಯ ಎನ್ನುವಂತೆ ವರ್ತಿಸಿ, ದಲಿತರ ಮತಗಳನ್ನು ಪಡೆದು, ಅಧಿಕಾರಕ್ಕೆ ಬಂದ ರಾಜ್ಯ ಕಾಂಗ್ರೆಸ್ ಸರ್ಕಾರವು ಬೆಕ್ಕು ಕಣ್ಮುಚ್ಚಿ ಹಾಲು ಕುಡಿದರೆ ಬೇರೆಯವರಿಗೆ ಕಾಣುವುದಿಲ್ಲ ಎನ್ನುವಂತೆ ಒಂದೆಡೆ ದಲಿತರನ್ನು ಹೊಗಳುತ್ತಾ ಮತ್ತೊಂದೆಡೆ ರಾಜ್ಯ ಸರ್ಕಾರ ಪರಿಶಿಷ್ಟ ಸಮುದಾಯಕ್ಕೆ ಮೀಸಲಿದ್ದ ಅನುದಾನವನ್ನು ಬೇರೆ ಯೋಜನೆಗಳಿಗೆ ಉಪಯೋಗಿಸುತ್ತಿರುವುದು ಖಂಡನೀಯ ಎಂದರು.

ಇದು ದಲಿತ ಸಮುದಾಯಕ್ಕೆ ಮಾಡುತ್ತಿರುವ ನಯವಂಚನೆ, ಪರಿಶಿಷ್ಟ ಜಾತಿ ಮತ್ತು ಪಂಗಡಗಳ ಅಭಿವೃದ್ಧಿಗಾಗಿ ಮೀಸಲಿರಿಸಿದ್ದ ಅನುದಾನವನ್ನು ದಲಿತರ ಏಳಿಗೆಗಾಗಿ ಬಳಸದೆ 15ಸಾವಿರ ಕೋಟಿ ಹಣವನ್ನು ಸರ್ಕಾರ ತನ್ನ ಅಭೂತಪೂರ್ವ ಐತಿಹಾಸಿಕ ಸಾಧನೆಯೆಂದು ಹೇಳಿಕೊಳ್ಳುವ ಗ್ಯಾರಂಟಿ ಯೋಜನೆಗಳಿಗೆ ಬಳಕೆ ಮಾಡಿರುವುದು ನಾಚಿಕೆಗೇಡಿನ ಸಂಗತಿ.

ಪರಿಶಿಷ್ಟರ ಮೇಲೆ ಇಷ್ಟೆಲ್ಲಾ ಅನ್ಯಾಯಗಳು ನಡೀತಾ ಇದ್ದರೂ ಸಹ ನಮ್ಮ ಶಾಸಕರು ಮಾತ್ರ ನಮಗೂ ಇದಕ್ಕೂ ಸಂಬಂಧವೇ ಇಲ್ಲ ಎಂಬಂತೆ ಇರುವುದು ದೊಡ್ಡ ದುರಂತವೇ ಸರಿ. ಹಾಗಾಗಿ ಮುಖ್ಯಮಂತ್ರಿಗಳು ಪರಿಶಿಷ್ಟರ ಅನುದಾನವನ್ನು ಬಳಸಬಾರದು. ಒಂದು ವೇಳೆ ಇಲ್ಲಿಯರೆಗೆ ಬಳಸಿದ್ದೇ ಆದಲ್ಲಿ ಆ ಅನುದಾನವನ್ನು ವಾಪಸ್ ನೀಡಬೇಕು ಹಾಗೂ ಪರಿಶಿಷ್ಟ ವಿದ್ಯಾರ್ಥಿಗಳ ಪ್ರೋತ್ಸಾಹಧನದ ಹೊಸ ಷರತ್ತನ್ನು ರದ್ದುಗೊಳಿಸಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟವನ್ನು ದಲಿತ ವಿದ್ಯಾರ್ಥಿ ಪರಿಷತ್ ರೂಪಿಸುತ್ತದೆ ಎಂದು ಎಚ್ಚರಿಸಿದರು.

**ವರದಿ : ಖುಷ್ಟರ್ ಚೋಪ್ದಾರ್**

## ಕಮೀಷನ್ ಹಣ ಬಿಡುಗಡೆಗೆ ನ್ಯಾಯ ಬೆಲೆ ಅಂಗಡಿಯವರಿಂದ ಮನವಿ

# ಆರ್ಥಿಕ ಸಂಕಷ್ಟದಲ್ಲಿ ನ್ಯಾಯ ಬೆಲೆ ಅಂಗಡಿಯವರು

**ರಬಕವಿ-ಬನಹಟ್ಟಿ :** ಐದು ತಿಂಗಳುಗಳಿಂದ ಸರ್ಕಾರ ನ್ಯಾಯ ಬೆಲೆ ಅಂಗಡಿಯವರಿಗೆ ಕಮೀಶನ್ ಹಣವನ್ನು ಬಿಡುಗಡೆ ಮಾಡದೇ ಇರುವುದರಿಂದ ಅಂಗಡಿಕಾರರು ಆರ್ಥಿಕ ಸಂಕಷ್ಟದ ಪರಿಸ್ಥಿತಿಯನ್ನು ಎದುರಿಸುತ್ತಿದ್ದಾರೆ. ಆದ್ದರಿಂದ ಸರ್ಕಾರ ಕೂಡಲೇ ಪಡಿತರ ನ್ಯಾಯ ಬೆಲೆ ಅಂಗಡಿಯವರ ಕಮೀಷನ್ ಹಣವನ್ನು ಬಿಡುಗಡೆ ಮಾಡಬೇಕು ಎಂದು ರಬಕವಿ ಬನಹಟ್ಟಿ ನ್ಯಾಯ ಬೆಲೆ ಅಂಗಡಿಗಳ ವಿತರಕರ ಸಂಘದ ಅಧ್ಯಕ್ಷ ಗಜಾನನ ನಾಗರಾಳ ಆಗ್ರಹಿಸಿದರು.

ಸೋಮವಾರ ಇಲ್ಲಿನ ತಹಶೀಲ್ದಾರ್ ಕಾರ್ಯಾಲಯದ



ಗ್ರೇಡ್-2 ತಹಶೀಲ್ದಾರ್ ಎಸ್. ಬಿ. ಕಾಂಬಳೆಯವರಿಗೆ ಮನವಿ ಸಲ್ಲಿಸಿ ಅವರು ಮಾತನಾಡಿದರು. ಸರ್ಕಾರ ಫಲಾನುಭವಿಗಳಿಗೆ ಸಮರ್ಪಕವಾಗಿ ಆಹಾರ ಧಾನ್ಯಗಳನ್ನು ಪೂರೈಕೆ ಮಾಡುತ್ತಿದ್ದು, ಅಂಗಡಿಗಳ ಬಾಡಿಗೆ, ವಿದ್ಯುತ್ ಬಿಲ್ ಸೇರಿದಂತೆ ಇನ್ನಿತರ ಖರ್ಚುಗಳನ್ನು ಭರಿಸುವುದಕ್ಕೂ ತೊಂದರೆಯಾಗಿದೆ ಮತ್ತು ಕುಟುಂಬಗಳ ನಿರ್ವಹಣೆಯೂ ಕಷ್ಟದಾಯಕವಾಗಿದೆ. ಆದ್ದರಿಂದ ಸರ್ಕಾರ ನ್ಯಾಯ ಬೆಲೆ ಅಂಗಡಿಯವರ ಕಮೀಷನ್ ಹಣವನ್ನು ಮತ್ತು ಐದು ವರ್ಷದಿಂದ ಬಾಕಿ ಉಳಿದಿರುವ ಈಕೆವೈಸಿ ಹಣವನ್ನು ಸಹ ಬಿಡುಗಡೆ ಮಾಡಬೇಕು. ಆದ್ದರಿಂದ ಸರ್ಕಾರ ಇದರ ಬಗ್ಗೆ ಗಮನ ನೀಡಬೇಕು ಎಂದು ಗಜಾನನ ನಾಗರಾಳ ಆಗ್ರಹಿಸಿದರು.

ಈ ಸಂದರ್ಭದಲ್ಲಿ ಆರೀಫ್ ಕೊಣ್ಣೂರ, ಸಂಜಯ ಮಾಲಾಪುರ, ಚಂದ್ರಶೇಖರ ಅಂಬಲಿ, ಹನುಮಂತ ಕುಂದಗೋಳ, ಪರಪ್ಪ ಬರಗಲ್, ಶಂಕರ ಬಿಳ್ಳೂರ, ಸಂತೋಷ ಕಂಚುಣಕಿ, ಶೇಖರ ಸಜ್ಜನವರ, ಶ್ರೀಧರ ಹೂಗಾರ, ಸುಭಾಸ ಗಿರಿಸಾಗರ, ಬಾಳಕೃಷ್ಣ ಪತ್ತಾರ, ಶಂಕರ ಆಸಂಗಿ, ಮಹಾದೇವ ಗಿಡದಾನಪ್ಪಗೋಳ, ವಿಜಯ ಜವಳಗಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ವಾರದ ಸಂತೆಯಲ್ಲಿ ಮಂಗನ ಚೆಲ್ಲಾಟಕ್ಕೆ ಓರ್ವ ಮಹಿಳೆ ಸಾವು

**ಜಮಖಂಡಿ :** ಬಾಗಲಕೋಟೆ ಜಿಲ್ಲೆ ಜಮಖಂಡಿ ತಾಲೂಕಿನ ಆಲಗೂರ ಗ್ರಾಮದಲ್ಲಿ ವಾರದ ಸಂತೆ ಸೋಮವಾರ ಕಾಯಿಪಲ್ಲೆ ಮಾರುತ್ತಿದ್ದ ಮಹಿಳೆ ಮೇಲೆ 45 ವರ್ಷದ ದೇವಸ್ಥಾನದ ದ್ವಾರಬಾಗಿಲದ ಮೇಲ್ಛಾವಣಿ ಮೇಲೆ ಮಂಗಗಳ ಚಲ್ಲಾಟದಿಂದ ಮೇಲ್ಛಾವಣಿ ಕುಸಿತದಿಂದ ಮಹಿಳೆ ಸಾವು ಸಂಭವಿಸಿದೆ. ಆಲಗೂರಿನ ಚಂದ್ರವ್ವದೇವಿ ದೇವಸ್ಥಾನದ ಹಳೆ ಕಟ್ಟಡ ಮೇಲೆ ಮಂಗಗಳ ಚೆಲ್ಲಾಟದ ಸಂದರ್ಭದಲ್ಲಿ ದೇವಸ್ಥಾನದ ದ್ವಾರಬಾಗಿಲ ಮೇಲ್ಛಾವಣಿ ಮೇಲಿಂದ ಕಳಚಿದ ಪರಿಣಾಮವಾಗಿ ಕಳಗಡೆ ಕುಳಿತು ಕಾಯಿಪಲ್ಲೆ ಮಾರಾಟದಲ್ಲಿ ತೊಡಗಿದ್ದ ಹುನ್ನೂರ ಗ್ರಾಮದ ನಿವಾಸಿ ಸುರೇಖಾ ಕಂಬಾರ (44) ಮೇಳೆ ಬಿದ್ದಿರುವ ಪರಿಣಾಮ ಸ್ಥಳದಲ್ಲಿ ಮೃತ ಗೊಂಡಿದ್ದಾಳೆ. ಜಮಖಂಡಿ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ರೋಟರಿ ಸಂಸ್ಥೆಯಲ್ಲಿ ಅಧಿಕಾರ ಪ್ರಮುಖವಲ್ಲ ಸೇವೆ ಮುಖ್ಯ

**ಜಮಖಂಡಿ :** ರೋಟರಿ ಸಂಸ್ಥೆ ನಿರಂತರವಾಗಿ ಸಮಾಜಮುಖಿ ಸೇವೆಗಳೊಂದಿಗೆ ಸಾರ್ವಜನಿಕ ವಲಯದಲ್ಲಿ ಗುರುತಿಸಿಕೊಂಡಿದೆ. ರೋಟರಿ ಸಂಸ್ಥೆಯಲ್ಲಿ ಅಧಿಕಾರ ಪ್ರಮುಖವಲ್ಲ, ಸೇವೆಗಳು ನಮ್ಮೆಲ್ಲರ ಕರ್ತವ್ಯವಾಗಬೇಕು ಎಂದು ರೋಟರಿ ಸಂಸ್ಥೆಯ ಗೌರ್ನರ್ ಅವಿನಾಶ ಪೋದಾರ ಹೇಳಿದರು.

ನಗರದ ಪಂಚಮಸಾಲಿ ಸಮುದಾರ್ಯ ಭವನದ ಸಭಾಭವನದಲ್ಲಿ ರೋಟರಿ ಮತ್ತು ಇನ್ನರವ್ಹೀಲ್ ಸಂಸ್ಥೆಯ 2024-25ನೇ ಸಾಲಿನ ಅಧ್ಯಕ್ಷ ಮತ್ತು ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ರೋಟರಿ ಸಂಸ್ಥೆಯಲ್ಲಿ ಪ್ರತಿ ವರ್ಷ ಅಧ್ಯಕ್ಷ ಹುದ್ದೆಗಳ ಬದಲಾವಣೆಯಾಗಲಿದ್ದು,



ಸಮರ್ಪಜಕವಾಗಿ ನಿಭಾಯಿಸಿ ಯಶಸ್ವಿಯಾಗಿ ಮುನ್ನಡೆಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಪೋಲಿಯೊ ನಿರ್ಮೂಲನೆಯಲ್ಲಿ ನಮ್ಮ ಸಂಸ್ಥೆಯ ಪಾತ್ರ ಮಹತ್ವದಾಗಿದೆ. ಅಧ್ಯಕ್ಷ ಆಡಳಿತ ಅವಧಿಯಲ್ಲಿ ಎಲ್ಲ ಸದಸ್ಯರ ಮನಗೆದ್ದು, ಸಾಮಾಜಿಕವಾಗಿ ಒಳ್ಳೆಯ ಕೆಲಸಗಳನ್ನು ಮಾಡಬೇಕಾಗುತ್ತದೆ. ಸೇವೆಗಳ ಮೂಲಕ ಪದಾಧಿಕಾರಿಗಳು ಸಮಾಧಾನ ತೃಪ್ತಿ ತಂದುಕೊಳ್ಳಬೇಕು ಎಂದರು.

ರೋಟರಿ ಸಂಸ್ಥೆ ನೂತನ ಅಧ್ಯಕ್ಷ ಕಿರಣ ದೇಸಾಯಿ ಅಧಿಕಾರ ಸ್ವೀಕರಿಸಿ ಮಾತನಾಡಿ, ಸಮಾಜಕ್ಕೆ ಒಳ್ಳೆಯತನ ನೀಡುವ ಮೂಲಕ ಸಂಸ್ಥೆಯ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತೇನೆ. ಡೆಂಗ್ಯೂ, ಕ್ಯಾನ್ಸರ್ ಹೀಗೆ ಆರೋಗ್ಯದ ಬಗ್ಗೆ, ರೈತರ ಮತ್ತು ಶಿಕ್ಷಣಕ್ಕೆ ಸಂಬಂಧಿಸಿದಂತೆ ಶಿಬಿರ, ಕಾರ್ಯಾಗಾರಗಳನ್ನು ಹಮ್ಮಿಕೊಳ್ಳಲಾಗುವದು ಎಂದರು.

ರೋಟರಿಸಂಸ್ಥೆ ನೂತನ ಉಪಾಧ್ಯಕ್ಷ ಮುತ್ತುರಾಜ ಅತ್ತೇಪ್ಪನ್ನರ, ಕಾರ್ಯದರ್ಶಿ ಚಂದ್ರಗುಪ್ತ ಬೆಳಗಲಿ, ಸಹಕಾರ್ಯದರ್ಶಿ ಮಲ್ಲಪ್ಪ ಬುಜರುಕ, ಖಜಾಂಚಿ ಪ್ರಕಾಶ ಶಿಂಧೆ, ಸಹಖಜಾಂಚಿ ಶಂಕರ ಪಟ್ಟಣಶೆಟ್ಟಿ, ಶೀತಲ ನ್ಯಾಮಗೌಡ ಮತ್ತು ಇನ್ನರವ್ಹೀಲ್ ಸಂಸ್ಥೆ ನೂತನ ಅಧ್ಯಕ್ಷೆ ಅಲ್ಕಾ ಮಾಳಗಿ, ಕಾರ್ಯದರ್ಶಿ ಗಿರಿಜಾ ಮೈತ್ರಿ, ಖಜಾಂಚಿ ಮೇಘಾ ಮಹಾಬಳಶೆಟ್ಟಿ ಅಧಿಕಾರವನ್ನು ಸ್ವೀಕರಿಸಿದರು.

ವೇದಿಕೆಯಲ್ಲಿ ರೂಪಾ ಪೋತದಾರ, ಬೆಳಗಾವಿಯ ಶ್ರೀಹರ್ಷಶಾ, ಆಶಾದೇವಿ ಗುಡಗುಂಟಿ, ರವೀಂದ್ರ ಗೌಳಿ, ಬಸವರಾಜ ಆಲಗೂರ, ಡಾ.ಸುಕಣ್ಯಾ ಕಲೂತಿ, ಆರ್.ಪಿ.ನ್ಯಾಮಗೌಡ, ಎಸ್. ವೈ.ಬಿರಾದಾರ, ಡಾ.ಮಾಳೇಶ ಪೂಜಾರಿ, ಮಾಹಾನಂದಾ ಧರಿಗೌಡರ, ಅರ್ಚನಾ ಕಾಖಂಡಕಿ, ಡಾ.ಅಶ್ವಿನಿ ಪೂಜಾರಿ, ಡಾ.ಜ್ಯೋತಿ ದೇವರಡ್ಡಿ ಸಹಿತ ಹಲವರು ಇದ್ದರು.

# ಪಟ್ಟಣದ ಸ್ವಚ್ಛತೆಗೆ ಸಾರ್ವಜನಿಕರ ಸಹಕಾರ ಅಗತ್ಯ: ಶ್ರೀನಿಧಿ ಕುಲಕರ್ಣಿ

**ಮಹಾಲಿಂಗಪುರ :** ಪಟ್ಟಣದ ಹಿಂದೂ ರೂದ್ರಭೂಮಿ, ಕುಡಿಯುವ ನೀರಿನ ಮೂಲಾದಾರವಾದ ಕೆರೆ ಸ್ವಚ್ಛತೆಗೆ ಪುರಸಭೆಯ ಜೊತೆಗೆ ಪಟ್ಟಣದ ಯುವಕರು ಮತ್ತು ಸಾರ್ವಜನಿಕರ ಸಹಕಾರ ಅಗತ್ಯವಿದೆ ಎಂದು ಹಿಂದೂ ಸಂಘಟನೆಯ ಯುವ ಮುಖಂಡ ಶ್ರೀನಿಧಿ ಕುಲಕರ್ಣಿ ಹೇಳಿದರು.



ರವಿವಾರ ಹಿಂದೂ ಸಂಘಟನೆಗಳ ವತಿಯಿಂದ ಹಮ್ಮಿಕೊಂಡಿದ್ದ ಪಟ್ಟಣದ ಕೆರೆಯ ಸ್ವಚ್ಛತಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು ಕಳೆದ 7 ವಾರಗಳಿಂದ ನಮ್ಮ ಸಂಘಟನೆಗಳಿಂದ ನಿರಂತರವಾಗಿ ಹಿಂದೂ ರುದ್ರಭೂಮಿ ಹಾಗೂ ಕೆರೆಯ ಆವರಣವನ್ನು ಸ್ವಚ್ಛತೆ ಮಾಡುತ್ತಿದ್ದೇವೆ ಎಂದರು.

ಆರ್‌ಎಸ್‌ಎಸ್‌ನ ಸ್ವಯಂ ಸೇವಕ ಆನಂದ ಶಿರಗುಪ್ಪಿ ಮಾತನಾಡಿ ನಮ್ಮ ಹಿಂದೂಪರ ಸಂಘಟನೆಗಳ ಸಮಾನ ಮನಸ್ಕ ಯುವಕರು ಪ್ರತಿ ರವಿವಾರದಂತೆ ಒಂದು ವರ್ಷದವರೆಗೆ ನಿರಂತರವಾಗಿ ಪಟ್ಟಣದಲ್ಲಿರುವ ಹಿಂದೂ ರುದ್ರಭೂಮಿ, ವಿವಿಧ ದೇವಸ್ಥಾನಗಳ ಆವರಣವನ್ನು ಸ್ವಚ್ಛತೆ ಮಾಡುವ ಸಂಕಲ್ಪ ಮಾಡಿದ್ದೇವೆ ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ನಮ್ಮ ಸ್ವಚ್ಛತಾ ಅಭಿಯಾನದಲ್ಲಿ ಭಾಗವಹಿಸಬಹುದು ಎಂದರು.

ಮುಂಜಾನೆ 6 ರಿಂದ 9ಗಂಟೆಯವರೆಗೆ ಹಿಂದೂ ಸಂಘಟನೆಗಳ ಯುವಕರು ಸ್ವಚ್ಛತಾ ಕಾರ್ಯದಲ್ಲಿ ಭಾಗಿಯಾಗಿ ಶ್ರಮದಾನ ಮಾಡಿದರು. ಪುರಸಭೆ ಸದಸ್ಯ ರವಿ ಜವಳಗಿ, ಪತ್ರಕರ್ತ ಚಂದ್ರಶೇಖರ ಮೋರೆ ಶ್ರಮದಾನದಲ್ಲಿ ಭಾಗವಹಿಸಿದ್ದರು.

ಬಸವರಾಜ ಮುರಾರಿ, ಹಣಮಂತ ನಾವ್ಹಿ, ರಾಘವೇಂದ್ರ ಶಿರೋಳ, ರಾಘು ಪವಾರ, ದಾನೇಶ ಡೊಂಬರ, ಮಂಜುನಾಥ ಭಾವಿಕಟ್ಟಿ, ಬೈರೇಶ ಆದೆಪ್ಪನವರ, ಅರ್ಜುನ ಪವಾರ, ಶಿವಾನಂದ ಹುಣಶ್ಯಾಳ, ಶಶಿ ಬದ್ನಿಕಾಯಿ, ಅನೀಲ ಖವಾಸಿ, ಆನಂದ ಮಡ್ಡೆನ್ನವರ, ಮಹಾಲಿಂಗ ಹಾವನಳ್ಳಿ, ರಾಘು ಗರಗಟ್ಟಿ, ರಾಜು ನಾವ್ಹಿ ಸೇರಿದಂತೆ ಹಲವರು ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿದ್ದರು.

# ಪ್ರೊ. ಪಿ.ಸಿ. ಮಹಾಲನೋಬಿಸ್ ಜನ್ಮದಿನದ ಅಂಗವಾಗಿ 18ನೇ ಸಾಂಖ್ಯಿಕ ದಿನ ಆಚರಣೆ



**ವಿಜಯಪುರ :** ಸಾಂಖ್ಯಿಕ ತಜ್ಞ ಪಿ.ಸಿ.ಮಹಾಲನೋಬಿಸ್ ಅವರ ಜನ್ಮ ದಿನದ ಅಂಗವಾಗಿ ವಿಜಯಪುರ ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಬುಧವಾರ ನಿರ್ಣಯಗಳನ್ನು ಕೈಗೊಳ್ಳುವಲ್ಲಿ ದತ್ತಾಂಶಗಳ ಬಳಕೆ ಎಂಬ ಘೋಷವಾಕ್ಯದೊಂದಿಗೆ ಸಾಂಖ್ಯಿಕ ದಿನ ಆಚರಣೆ ಮಾಡಲಾಯಿತು.

ಬುಧವಾರ ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಎನ್.ಕೆ. ಗೋಠೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಯಾವುದೇ ಯೋಜನೆಗಳನ್ನು ರೂಪಿಸಲು ಅಂಕಿ-ಅಂಶಗಳು ಮಹತ್ವದ ಪಾತ್ರ ವಹಿಸುತ್ತವೆ. ಯಾವುದೇ ಕೆಲಸವನ್ನು ಮಾಡಲು ಮೊದಲಿಗೆ ಯೋಜನೆಯನ್ನು ಹಾಕಿಕೊಳ್ಳಬೇಕು. ಯೋಚನೆ, ಯೋಜನೆಯಿಂದ ಅಭಿವೃದ್ಧಿ ಸಾಧ್ಯ ಎಂದು ಹೇಳಿದರು.

ವಿವಿಎಸ್ ಭನಸಿಲ್ ವ್ಹಿಠಲದಾಸ ದರಬಾರ ಪದವಿ ಮಹಾ ವಿದ್ಯಾಲಯದ ಉಪನ್ಯಾಸಕ ಆನಂದ ಕುಲಕರ್ಣಿ ನಿರ್ಣಯ ಕೈಗೊಳ್ಳುವಲ್ಲಿ ದತ್ತಾಂಶಗಳ ಬಳಕೆ (Use of Data for Decision Making) ಕುರಿತು ಉಪನ್ಯಾಸ ನೀಡಿ, ನಮ್ಮ ದಿನನಿತ್ಯದ ಜೀವನದಲ್ಲಿ ಗಣಿತ ಮತ್ತು ಸಂಖ್ಯಾಶಾಸ್ತ್ರವನ್ನು ಹೇಗೆ ಉಪಯೋಗಿಸುತ್ತೇವೆ ಎಂಬುವುದನ್ನು ನೈಜ ಉದಾಹರಣೆಗಳೊಂದಿಗೆ ವಿವರಿಸಿ ಸವಿಸ್ತಾರವಾಗಿ ಮಾತನಾಡಿದರು.

ಮುಖ್ಯ ಅತಿಥಿಗಳಾಗಿ ಬಸವನ ಬಾಗೇವಾಡಿ ತಾಲ್ಲೂಕಿನ ನಿವೃತ್ತ ತಾಲ್ಲೂಕು ಯೋಜನಾಧಿಕಾರಿ ಆರ್.ಪಿ.ಪಾಟೀಲ, ತಾಲ್ಲೂಕು ಪಂಚಾಯತ್ ತಾಲ್ಲೂಕು ಯೋಜನಾಧಿಕಾರಿ ಎಸ್. ಎಸ್.ಅಳ್ಳಗಿ ಭಾಗವಹಿಸಿದ್ದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಕಛೇ-ರಿಯ ಸಹಾಯಕ ನಿರ್ದೇಶಕ ಅಲ್ತಾಫ್‌ಅಹ್ಮದ್ ಬಾಶಾಲಾಲ ಮಣಿಯಾರ ಪ್ರಾಸ್ತಾವಿಕವಾಗಿ ಮಾತನಾಡಿದರು.

ಸಹಾಯಕ ಸಾಂಖ್ಯಿಕ ಅಧಿಕಾರಿ ಪರಮೇಶ ಕೆಂಚಣ್ಣವರ ನಿರೂಪಿಸಿದರು.

ಸಹಾಯಕ ಸಾಂಖ್ಯಿಕ ಅಧಿಕಾರಿ ಸುಷ್ಮಾ ಮಜ್ಜಗಿ ಸ್ವಾಗತಿಸಿ, ವಂದಿಸಿದರು.

# ದೇಶಾಭಿಮಾನವೆಂಬುದು ತಾಳಿಕೋಟೆಯಲ್ಲಿಯೂ ಇದೆ: ಸಿದ್ದಲಿಂಗಶ್ರೀ

**ತಾಳಿಕೋಟೆ :** ಬ್ರೀಟಿಷರ ಆಳ್ವಿಕೆಯನ್ನು ದಿಕ್ಕರಿಸಿ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸ್ವಾತಂತ್ರ್ಯ ಯೋಧರು ಅಂದು ತಾಳಿಕೋಟೆಯಲ್ಲಿದ್ದವರು ತಮ್ಮ ದೀರತನದಲ್ಲಿ ಹೋರಾಟ ಮಾಡಿ ಸ್ವಾತಂತ್ರ್ಯ ತಂದುಕೊಡುವದರಲ್ಲಿ ಯಶಸ್ವಿಯಾಗಿದ್ದ ತಾಳಿಕೋಟೆಯ ಶ್ರೀಮಂತ ಮನೆತನದ ದಿ.ಶಿವಲಿಂಗಪ್ಪ ಸಾಲಂಕಿ ಅವರೊಬ್ಬರು ಸಹ ಭಾಗವಹಿಸಿದ್ದರೆಂಬ ವಾಡಿಕೆ ಇನ್ನೂಈಭಾಗದಲ್ಲಿಜೀವಂತವಿದೆ ಎಂದು ಶ್ರೀ ಖಾಸ್ಗತೇಶ್ವರ ಮಠದ ಬಾಲ ಶಿವಯೋಗಿ ಶ್ರೀ ಸಿದ್ದಲಿಂಗ ದೇವರು ನುಡಿದರು.



ಶುಕ್ರವಾರರಂದು ಕೃಷಿ ಉತ್ಪನ್ನ ಮಾರುಕಟ್ಟೆ ಸಭಾಭವನದಲ್ಲಿ ಸ್ವಾತಂತ್ರ್ಯಯೋಧದಿ.ಶಿವಲಿಂಗಪ್ಪ ಸಾಲಂಕಿ ಅವರ ಮೊಮ್ಮಗ ಸಿದ್ರಾಮ ಸುಭಾಸ ಸಾಲಂಕಿ ಅವರ ಧರ್ಮಪತ್ನಿಸೌ.ದಾನೇಶ್ವರಿ ಇವರ ಸೀಮಂತ ಕಾರ್ಯಕ್ರಮದಲ್ಲಿ ಭಾಗವಹಿಸಿ ಆಶಿರ್ವದಿಸಿ ಮಾತನಾಡುತ್ತಿದ್ದ ಅವರು ಸ್ವಾತಂತ್ರ್ಯ ದೊರೆತ ಬ್ರೀಟಿಷರ ಕಾಲಾವದಿ ಮುಕ್ತಾಯದಲ್ಲಿಯೇ ಆರೋಗ್ಯವೇ ಭಾಗ್ಯವೆಂಬುದನ್ನು ಅರೀತ ಅಂದಿನ ಸ್ವಾತಂತ್ರ್ಯ ಯೋಧ ದಿ.ಶಿವಲಿಂಗಪ್ಪ ಸಾಲಂಕಿ ಅವರು ಚಿಕ್ಕದಾದ ಒಂದು ಔಷಧ ವ್ಯಾಪಾರವನ್ನು ಪ್ರಾರಂಬಿಸಿ ತಾಳಿಕೋಟೆ ಪಟ್ಟಣವಲ್ಲದೇ ಸುತ್ತಮುತ್ತಲಿನ ಗ್ರಾಮಗಳ ಗ್ರಾಮಸ್ಥರ ಅನುಕೂಲಕ್ಕಾಗಿ ಪ್ರಾರಂಬಿಸಿದ್ದ ಔಷಧ ವ್ಯಾಪಾರಸ್ಥರಲ್ಲಿ ಇವರು ಪ್ರಥಮ ಔಷಧ ವ್ಯಾಪಾರಸ್ಥರೆಂದು ಹೆಗ್ಗಳಿಕೆಗೆ ಪಾತ್ರರಾದ ದಿ.ಶಿವಲಿಂಗಪ್ಪನವರು ತಮ್ಮ ನಾಲ್ಕುಮಕ್ಕಳಾದದಿ.ಶರಣಬಸ್ಸಪ್ಪ, ದಿ.ಮಲಕಾಜಪ್ಪ, ಚನಬಸ್ಸಪ್ಪ, ಸುಭಾಸ ಇವರಿಗೂ ಸಹ ಔಷಧ ಗುಳಿಗೆಗಳ ಬಗ್ಗೆ ಕೆಲವು ಝಡ್ಡು ಜಾಪತ್ರೆಗಳ ಬಗ್ಗೆಯೂ ಮಾಹಿತಿ ನೀಡಿ ಅವರಿಗೂ ಸಹ ಸರ್ಕಾರದ ಪರವಾನಿಗೆಯೊಂದಿಗೆ ಔಷಧ ವ್ಯಾಪಾರವನ್ನು ಪ್ರಾರಂಬಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಿದ ದಿ.ಶಿವಲಿಂಗಪ್ಪ ಸಾಲಂಕಿ ಅವರು ದೇಶಕ್ಕಾಗಿ ದಿಟ್ಟತನದಿಂದ ಹೋರಾಟ ಮಾಡಿದ್ದರು ಎಂಬುದು ಅನೇಕ ಹಿರಿಯರ ಮಾತುಗಳಿಂದಲೂ ಸಹ ಹಾಗೂ ಕೆಲವು ಪ್ರಕಟಗೊಂಡಂತಹ ಸ್ವಾತಂತ್ರ್ಯ ಯೋಧರ ಮಾಹಿತಿಯಿಂದಲೂ ಸಹ ಗೊತ್ತಾಗಿದೆ ಎಂದರು.

ಈಗಿನ ಅವರ ಸಮಸ್ತ ಎಲ್ಲ ಕುಟುಂಭದವರು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರರಾಗಿ ಅಜ್ಜ ಹಾಕಿಕೊಟ್ಟ ಆರೋಗ್ಯವೇ ಭಾಗ್ಯವೆಂಬ ಮಾರ್ಗವನ್ನು ಹಿಡಿದಿರುವದು ಸಂತಸ ತಂದಿದೆ ಎಂದು ಹೇಳಿದ ಶ್ರೀಗಳು ಉಪಸ್ಥಿತ ಇಡೀ ಸಾಲಂಕಿ ಕುಟುಂಬದವರಿಗೂ ಹಾಗೂ ಕಾರ್ಯಕ್ರಮದಲ್ಲಿ ಭಾಗವಹಿಸಿದ ಎಲ್ಲರಿಗೂ ಶ್ರೀಗಳು ಆಶಿರ್ವದಿಸಿದರು.

ಈ ಸಮಯದಲ್ಲಿ ಸಾಲಂಕಿ ಮನೆತನದ ಚನ್ನಬಸ್ಸಪ್ಪ ಸಾಲಂಕಿ, ಸುಭಾಸ ಸಾಲಂಕಿ, ಶ್ರೀಮತಿ ಕಸ್ತೂರಿಬಾಯಿ ಸಾಲಂಕಿ, ಸು-ರೇಖಾ ಸಾಲಂಕಿ,

ರಮೇಶ ಸಾಲಂಕಿ, ಶೋಭಾ ಸಾಲಂಕಿ, ಶಿವಲೀಲಾ ಸಾಲಂಕಿ, ಸಂಗೀತಾ ಸಾಲಂಕಿ, ಮನಶ್ರೀ ಸಾಲಂಕಿ, ಶಿವಲಿಂಗ ಸಾಲಂಕಿ, ರಾಕೇಶ ಸಾಲಂಕಿ, ಇಂದುಮತಿ ಶಾಹಾಪೂರ, ಸುಮಂಗಲಾ ಪಟ್ಟಣಶೆಟ್ಟಿ, ಹಾಗೂ ಗುರು ಹಿರಿಯರು ಉಪಸ್ಥಿತರಿದ್ದರು.

# ಆಸ್ತಿಗಾಗಿ ಮಗನಿಂದಲೇ ತಂದೆಯ ಕೊಲೆ

**ಇಂಡಿ :** ಆಸ್ತಿ ವಿಚಾರವಾಗಿ ಕುಡಿದ ಅಮಲಿನಲ್ಲಿ ಹರಿತವಾದ ಆಯುಧದಿಂದ ಹೊಡೆದು ಮಗ ತಂದೆಯನ್ನೇ ಕೊಲೆ ಮಾಡಿರುವ ಘಟನೆ ಇಂಡಿ ತಾಲೂಕಿನ ಚಿಕ್ಕಮಣ್ಣೂರ್ ಗ್ರಾಮದಲ್ಲಿ ನಡೆದಿದೆ.

ಲಕ್ಷ್ಮಣ್ಣ ಮ್ಯಾಗೇರಿ (65) ಕೊಲೆಯಾದವರು. ಮಗ ಪ್ರಕಾಶ್ ಮ್ಯಾಗೇರಿ (33) ಕೊಲೆ ಮಾಡಿರುವುದಾಗಿ ತಿಳಿದು ಬಂದಿದೆ.

ಸುದ್ದಿ ತಿಳಿದು ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಆರೋಪಿ ಪ್ರಕಾಶ್ ಮ್ಯಾಗೇರಿಯನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಶಾಲಾ ಸಂಸತ್ತಿನ ಪದಾಧಿಕಾರಿಗಳ ಪದಗ್ರಹಣ ಸಮಾರಂಭ

**ಮೂಡಲಗಿ :** ಶಿಸ್ತು, ಸಮಯ ಪಾಲನೆ ಹಾಗೂ ನಿಯಮಿತವಾಗಿ ಕಾರ್ಯನಿರ್ವಹಿಸುವುದರಿಂದ ನಾಯಕತ್ವದ ಗುಣಗಳನ್ನು ವಿದ್ಯಾರ್ಥಿ ಜೀವನದಲ್ಲಿ ಬೆಳಿಸಿಕೊಳ್ಳಬಹುದೆಂದು ಚಿಕ್ಕೋಡಿಯ ಶಿಕ್ಷಣ ಇಲಾಖೆ ಅಧೀಕ್ಷಕ ಎ.ಸಿ.ಗಂಗಾಧರ ಹೇಳಿದರು

ಪಟ್ಟಣದ ಶ್ರೀನಿವಾಸ ಗ್ರಾಮೀಣಾಭಿವೃದ್ಧಿ ಮತ್ತು ಶಿಕ್ಷಣ ಸಂಸ್ಥೆ, ಮೂಡಲಗಿಯ ಶ್ರೀನಿವಾಸ ಸ್ಕೂಲ್ಸನಲ್ಲಿ ಇತ್ತೀಚಿಗೆ ಶಾಲಾ ಸಂಸತ್ತಿನ ಚುಣಾವಣೆಯನ್ನು ನಡೆಯಿತು ಅದರಸಂಸತ್ತುಪದಗ್ರಹಣಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು.




ಬಹುದೊಡ್ಡಪ್ರಜಾಪ್ರಭುತ್ವರಾಷ್ಟ್ರವಾದನಮ್ಮ ಭಾರತ ದೇಶದ ಚುನಾವಣಾ ವ್ಯವಸ್ಥೆಯನ್ನು ಮಾದರಿಯಾಗಿಟ್ಟುಕೊಂಡು, ಅದೇ ಮಾದರಿಯಲ್ಲಿ ನಮ್ಮ ಶಾಲಾ ಸಂಸತ್ತಿನ ಚುಣಾವಣೆ ನಡೆಯಿತು, ಶಾಲಾ ಸಂಸತ್ತಿನ ಚುಣಾವಣೆ ನಂತರ ಆಯ್ಕೆಯಾದ ಅಭ್ಯರ್ಥಿಗಳಿಗೆ ಖಾತೆ ಹಂಚಿಕೆ ಹಾಗೂ ಪ್ರಮಾಣ ವಚನ ಸ್ವೀಕಾರ ಕಾರ್ಯಕ್ರಮವು ಜರುಗಿತು.

ಮಾಧ್ಯಮಿಕಶಾಲಾಮಕ್ಕಳಿಗಾಗಿಏರ್ಪಡಿಸಿದ ವಿಶೇಷ ಕಾರ್ಯಾಗಾರದಲ್ಲಿ ಮಕ್ಕಳು ಎದುರಿಸುತ್ತಿರುವ ತರಗತಿ ಸವಾಲುಗಳಿಂದ ಹೇಗೆ ಹೊರಬರಬೇಕೆಂದು ಹಾಗೂ ಅನ್ವಯಿಕ ಪ್ರಶ್ನೆ ಪತ್ರಿಕೆಯನ್ನು ಸರಳವಾಗಿ ಬಿಡಿಸಲು ವಿದ್ಯಾರ್ಥಿಗಳ ಹಾಗೂ ಶಿಕ್ಷಕರ ಕಾರ್ಯಕ್ಷಮತೆಯ ಕುರಿತು ಚರ್ಚಿಸಿದರು.

ಈ ಕಾರ್ಯಾಗಾರದನಂತರ ಸಾರ್ವಜನಿಕ ಶಿಕ್ಷಣದ ಉಪ ನಿರ್ದೇಶಕರಾಗಿ ಬಡ್ತಿ ಹೊಂದಿದ್ದ ಎ.ಸಿ.ಗಂಗಾಧರ ಶಾಲಾ ಆಡಳಿತ ಮಂಡಳಿಯಿಂದ ಸನ್ಮಾನಿಸಲಾಯಿತು. ಶಾಲಾ ಕಾರ್ಯದರ್ಶಿ ವೆಂಕಟೇಶ ಪಾಟೀಲ, ಪ್ರಾಚಾರ್ಯ ಎಸ್.ಬಿ.ಮಠಪತಿ, ಸಂಯೋಜಕ ಅನಿಲಕುಮಾರ ಐ ಸಿ, ಶಾಲಾ ಸಿಬ್ಬಂದಿ ವರ್ಗ ಹಾಗೂ ಮಕ್ಕಳು ಉಪಸ್ಥಿತರಿದ್ದರು. ವಿದ್ಯಾರ್ಥಿಗಳು ಕಾರ್ಯಕ್ರಮವನ್ನು ನಿರೂಪಿಸಿ ವಂದಿಸಿದರು.

# ಡೆಂಗ್ಯೂ ನಿಯಂತ್ರಣ ಮುಂಜಾಗ್ರತ ಸಭೆ



**ಕೊಲ್ಹಾರ :** ಡೆಂಗ್ಯೂ ನಿಯಂತ್ರಣ ಕುರಿತು ಮುಂಜಾಗ್ರತ ಕ್ರಮವಾಗಿ ತಹಶೀಲ್ದಾರ ಎಸ್.ಎಸ್ ನಾಯಕಲಮಠ ಹಾಗೂ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಸುನೀಲ್ ಮದ್ದೀನ ನೇತೃತ್ವದಲ್ಲಿ ಸೋಮವಾರ ಪಟ್ಟಣ ಪಂಚಾಯತ ಕಾರ್ಯಾಲಯದಲ್ಲಿ ತಾಲೂಕ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳ ಸಭೆ ಜರುಗಿತು.

ಡೆಂಗ್ಯೂ ನಿಯಂತ್ರಣದ ಕುರಿತು ಮುಂಜಾಗ್ರತವಾಗಿ ತೆಗೆದುಕೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲಾಯಿತು.

ತಹಸೀಲ್ದಾರ ಎಸ್.ಎಸ್ ನಾಯಕಲಮಠ ಹಾಗೂ ತಾಲೂಕಪಂಚಾಯತಕಾರ್ಯನಿರ್ವಾಹಕಅಧಿಕಾರಿ ಸುನೀಲ್ ಮದ್ದೀನ ಮಾತನಾಡಿ ಕೊಲ್ಹಾರ ಪಟ್ಟಣ ಸಹಿತ ತಾಲೂಕ ವ್ಯಾಪ್ತಿಯಲ್ಲಿನ ಪ್ರತಿ ಗ್ರಾಮಗಳಲ್ಲಿ ಫಾಗಿಂಗ್ ಮಾಡುವುದು, ಬೇಕಾ ಬಿಟ್ಟಿಯಾಗಿ ನೀರು ನಿಲ್ಲದಂತೆ ಎಚ್ಚರಿಕೆ ವಹಿಸುವುದು, ಡೆಂಗ್ಯೂ ನಿಯಂತ್ರಣ ಕುರಿತು ಗ್ರಾಮಗಳಲ್ಲಿ ಡಂಗೂರದ ಮೂಲಕ ಹಾಗೂ ಘನತ್ಯಾಜ್ಯ ವಿಲೇವಾರಿ ವಾಹನದ ಮೂಲಕ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ತಮ್ಮ ಕಾರ್ಯವ್ಯಾಪ್ತಿಯಲ್ಲಿ ಡೆಂಗ್ಯೂ ತಡೆಗಟ್ಟಲು ವಿವಿಧ ಕ್ರಮ ಕೈಗೊಳ್ಳಬೇಕು ಹಾಗೂ ಪ್ರತಿ ಶುಕ್ರವಾರ ಮತ್ತು ಶನಿವಾರವಾರದಂದು ವಿಶೇಷ ಅಭಿಯಾನವನ್ನು ಹಮ್ಮಿಕೊಂಡು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶ್ರೀಮತಿ ನಿರ್ಮಲಾ ಸುರಪೂರ, ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಶ್ರೀಮತಿ ಲಕ್ಷ್ಮೀ ತೆಲ್ಲೂರ, ಪ.ಪಂ ಮುಖ್ಯಾದಿಕಾರಿ ಉಮೇಶ ಚಲವಾದಿ, ಆರೋಗ್ಯ ನಿರೀಕ್ಷಕ ಆರ್.ಎಮ್ ಚಿಂಚೂಳ್ಳಿ ಹಾಗೂ ತಾಲೂಕ ಮಟ್ಟದ ವಿವಿಧ ಇಲಾಖೆಗಳ ಮುಖ್ಯಸ್ಥರು ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# 2ಎ ಮೀಸಲಾತಿ ಸಿಗೋವರೆಗೂ ನಮ್ಮ ಹೋರಾಟ ನಿಲ್ಲುವದಿಲ್ಲ: ಬಸವ ಜಯಮೃತ್ಯುಂಜಯ ಮಹಾಸ್ವಾಮಿಗಳು

**ಹೂವಿನಹಿಪ್ಪರಗಿ:**ಪಂಚಮಸಾಲಿಸಮಾಜದ ಲಕ್ಷಾಂತರ ಬಾಂಧವರು ಮನೆ ಮಠಗಳನ್ನು ಬಿಟ್ಟು ನಿರಂತರವಾಗಿ 3 ವರ್ಷಗಳಿಂದ ಚಳುವಳಿ ಮಾಡುತ್ತ ಬಂದಿದ್ದೇವೆ. ಇಷ್ಟೇಲ್ಲ ಚಳುವಳಿಗಳು ಯಶಸ್ವಿಯಾಗಲು ನಿಮ್ಮಗಳ ನಾಯಕತ್ವ ಹಾಗೂ ನಿರಂತರ ಸಹಕಾರ ಇತ್ತು ಎಂಬುವದನ್ನು ಸಮಾಜದ ಬಾಂಧವರು ಮರೆಯಲು ಸಾಧ್ಯವಿಲ್ಲ ಎಂದು ಲಿಂಗಾಯತ ಪಂಚಮಸಾಲಿ ಪ್ರಥಮ ಜಗದ್ಗುರು ಪೂಜ್ಯ ಶ್ರೀ ಬಸವ ಜಯಮೃತ್ಯುಂಜಯ ಮಹಾಸ್ವಾಮಿಗಳು ಹೇಳಿದರು. ಹೂವಿನಹಿಪ್ಪರಗಿ ಸಮೀಪದ ಕುದರಿ ಸಾಲವಾಡಗಿ ಗ್ರಾಮದಲ್ಲಿ ನಡೆದ ಶಾಸಕರುಗಳ ಮನೆಯಲ್ಲಿ ಪಂಚಮಸಾಲಿ ಆಗ್ರಹ ಪತ್ರ ಶಾಸಕ ರಾಜುಗೌಡ ಪಾಟೀಲರಿಗೆ ನೀಡಿ ಅವರು ಮಾತನಾಡಿದರು.



ಪೂರ್ವ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರ ನೇತೃತ್ವದ ಸರ್ಕಾರ ನಮ್ಮೆಲ್ಲರ ಹೋರಾಟಕ್ಕೆ ಮಣಿದು ಕೋನೆಯ ಗಳಿಗೆಯಲ್ಲಿ "2ಡಿ" ಎನ್ನುವಂತಹ ಹೋಸ ಪ್ರವರ್ಗವನ್ನು ಸೃಷ್ಟಿಸಿ ಮೀಸಲಾತಿಯ ಆದೇಶ ಪತ್ರವನ್ನು ಘೋಷಿಸಿತ್ತು ಆದರೆ ಅದು ಇನ್ನುವರೇಗೂ ಅನುಷ್ಠಾನಗೊಂಡಿಲ್ಲ ಎಂದ ಅವರು ನೂತನವಾಗಿ ರಾಜ್ಯದಲ್ಲಿ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯನವರ ನೇತೃತ್ವದಲ್ಲಿ ಅಸ್ತಿತ್ವಕ್ಕೆ ಬಂದ ಸರ್ಕಾರಕ್ಕೆ ನಾವು ನೀವು ಎಲ್ಲರೂ ಕೋಡಿ 2023ರ ಡಿಸೆಂಬರ್ 12 ರಂದು ಬೆಳಗಾವಿಯ ಸುವರ್ಣ ಸೌಧದಲ್ಲಿ ಮುಖ್ಯಮಂತ್ರಿಗಳಿಗೆ ಆಗ್ರಹ ಮಾಡಲಾಗಿತ್ತು ಆದರೆ ಅವರು ಕೊಟ್ಟ ಮಾತಿನಂತೆ ಮುಖ್ಯಮಂತ್ರಿಗಳು ಇದುವರೆಗೂ ಸಂಬಂಧಪಟ್ಟ ಕಾನೂನಾತ್ಮಕ ಸಭೆಯನ್ನು ಸಹ ಮಾಡಿಲ್ಲ ವೆಂದು ಬೇಸರ ವೆಕ್ತಪಡಿಸಿದರು.ಸರ್ಕಾರ ಅಸ್ತಿತ್ವಕ್ಕೆ ಬಂದಾಗಿನಿಂದ ಇಲ್ಲಿಯವರೆಗೆ ನಿಮ್ಮೆಲ್ಲರ ಸಹಕಾರದಿಂದ ನಾವುಗಳು ರಾಜ್ಯದ 12 ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿಯನ್ನು ತಡೆದು ಇಷ್ಟಲಿಂಗ ಪೂಜೆಯ ಮಾಡುವ ಮೂಲಕ ಸರ್ಕಾರದ ಗಮನ ಸೆಳೆಯಲು ಹೋರಾಟವನ್ನು 9 ತಿಂಗಳುಕಾಲ ಮಾಡುತ್ತ ಬಂದಿದ್ದೇವೆ ಆದರೆ ಇಲ್ಲಿಯವರೆಗೂ ಯಾವದೇ ಸ್ಪಂದನೆ ಸಹ ದೊರೆತಿಲ್ಲ ಎಂದು ಬೇಸರ ವೆಕ್ತಪಡಿಸಿದರು. ನಮ್ಮ ಸಮುದಾಯ ಚುನಾಯಿತ ಎಲ್ಲ ಪಕ್ಷಗಳ ಶಾಸಕರುಗಳು ಕಳೆದ ಒಂದು ವರ್ಷದ ಅವಧಿಯಲ್ಲಿ ನಡೆದಂತಹ ಮೂರು ಅಧಿವೇಶನದಲ್ಲಿ ಸಮಾಜದ ಬಗ್ಗೆ ಧ್ವನಿ ಎತ್ತದೇ ಇರುವುದು ಸಮಾಜದ ಇರುವುದು ಸಮಾಜದ ಬಾಂಧವರ ಅಸಮಾಧಾನಕ್ಕೂ ಕಾರಣವಾಗಿದೆ. ಆದ್ದರಿಂದ ತಮ್ಮ ಮೇಲೆ ಸಮಾಜದ ಋಣಭಾರ ಇದೆ. ಶೀಘ್ರದಲ್ಲಿ ನಡೆಯುವ ಮುಂಗಾರು ಅಧಿವೇಶನದಲ್ಲಿ ಪಕ್ಷಾತೀತವಾಗಿ ನಮ್ಮ ಸಮಾಜದ ಪರವಾಗಿ ಎಲ್ಲ ಲಿಂಗಾಯತ ಒಳ ಪಂಗಡಗಳ [ಓಬಿಸಿ] ಮೀಸಲಾತಿಗಾಗಿಹಾಗೂನಿಮ್ಮವಿಧಾನಸಭಾ ಕ್ಷೇತ್ರದಲ್ಲಿರುವ ಮೀಸಲಾತಿ ವಂಚಿತ ಸಮುದಾಯಗಳ ಪರವಾಗಿ ತಮ್ಮ ಹಕ್ಕನ್ನು ಪ್ರತಿಪಾದಿಸುವಂತೆ ಸರ್ಕಾರಕ್ಕೆ ಒತ್ತಾಯಿಸಿ. ನಿಮ್ಮೆಲ್ಲರ ಒತ್ತಡಕ್ಕೂ ಸರ್ಕಾರ ಸ್ಪಂದಿಸದೇ ಇದ್ದರೆ ನಮ್ಮೊಂದಿಗೆ ನಿರಂತರ ಹೋರಾಟಕ್ಕೆ ಭಾಗವಹಿಸಿ ಕೈ ಜೋಡಿಸಬೇಕೆಂದು ಮನವಿ ಮಾಡಿಕೊಂಡರು.ಶಾಸಕ ರಾಜುಗ-ೌಡ ಪಾಟೀಲ ಮಾತನಾಡಿ ಇಂದು ನಮ್ಮ ಮನೆಗೆ ಲಿಂಗಾಯತ ಪಂಚಮಸಾಲಿ ಪ್ರಥಮ ಜಗದ್ಗುರು ಪೂಜ್ಯ ಶ್ರೀ ಬಸವ ಜಯಮೃತ್ಯುಂಜಯ ಮಹಾಸ್ವಾಮಿಗಳು ಹಾಗೂ ಸಮಾಜದ ಬಾಂಧವರು ಸೇರಿ ಪತ್ರ ಚಳುವಳಿ ಮಾಡಿ ನಮಗೆ ಆಗ್ರಹ ಮಾಡಿದ ಕಾರಣದಿಂದಾಗಿ ಮುಂದಿನ ಅಧಿವೇಶನದಲ್ಲಿ ಪಕ್ಷಾತೀತವಾಗಿ ಲಿಂಗಾಯತ ಪಂಚಮಸಾಲಿ-ಮಲೆಗೌಡ ಲಿಂಗಾಯತ ಉಪಸಮಾಜಗಳಿಗೆ [ಓಬಿಸಿ] ಮೀಸಲಾತಿ ವನೀಡುವಂತೆ ನಡೆಯುವ ಹೋರಾಟಕ್ಕೆ ನಾನು ಸಹ ಬೆಂಬಲಿಸುತ್ತೇನೆ ಹಾಗೂ ಅಧಿವೇಶನದಲ್ಲಿ ಧ್ವನಿ ಎತ್ತುತ್ತೇನೆ ಎಂದರು. ಒಂದು ವೇಳೆ ಸರ್ಕಾರವು ಸೂಕ್ತವಾದ ಸ್ಪಂದನೆ ಮಾಡದೇ ಇದ್ದರೆ ಗುರುಗಳೊಂದಿಗೆಹಿಂದೆಮುಂದೆಎಂದಿಗೂ ಮೀಸಲಾತಿ ಸಿಗುವರೆಗೆ ಹೋರಾಟದಲ್ಲಿ ಭಾಗವಹಿಸಿ ಬೆಂಬಲಿಸುತ್ತೇನೆ ಎಂದರು. ಈ ಸಂದರ್ಭದಲ್ಲಿ ಸಮಾಜದ ಜಿಲ್ಲಾ ಅಧ್ಯಕ್ಷ ಬಿ.ಎಂ.ಪಾಟೀಲ, ಗುರು ಆಕಳವಾಡ, ಬಸವರಾಜ ಡೆಂಗಿ, ಬಾಪುಗೌಡ ಪಾಟೀಲ, ಶೇಖರಗೌಡ ಪಾಟೀಲ, ಶಂಕರಗೌಡ ಪಾಟೀಲ, ನಿಂಗನಗೌಡ ಪಾಟೀಲ, ಸಚಿನಗೌಡ ಪಾಟೀಲ, ಮಡು ಸಹುಕಾರ, ಅಪ್ಪಾಸಾಹೇಬಗೌಡ ಪಾಟೀಲ, ಅನೀಲಗೌಡ ಪಾಟೀಲ, ಬಾಳಾಸಾಹೇಬಗೌಡ ಪಾಟೀಲ,ಶ್ರೀಶೈಲ್ ಮುಳಜಿ, ಹಣುಮಂತ್ರಾಯಗೌಡ ಇದ್ದರು.

**ನಮ್ಮ ಸಮಾಜಕ್ಕೆ 2ಎ ಮೀಸಲಾತಿಗಾಗಿ ನಮ್ಮ ಸಮಾಜದ ಒಳಿತಿಗಾಗಿ ನನ್ನ ಶಾಸಕ ಸ್ಥಾನಕ್ಕೆ ರಾಜನಾಮೇ ಕೊಡಲು ಸಿದ್ಧನಿದ್ದೇನೆ ಹೋರಾಟ ಮಾತ್ರ ನಿಲ್ಲುವದಿಲ್ಲ.**
**। ರಾಜೂಗೌಡ ಪಾಟೀಲ**
**ಶಾಸಕರು ದೇವರಹಿಪ್ಪರಗಿ ವಿಧಾನಸಭಾಕ್ಷೇತ್ರ**

# ಕೃಷ್ಣೆಯ ಉಗಮಸ್ಥಾನದಲ್ಲಿ ಗಂಗಾ ಪೂಜೆ



**ಕೊಲ್ಹಾರ:** ಕೃಷ್ಣೆಯ ಉಗಮಸ್ಥಾನ ಮಹಾಬಳೇಶ್ವರದಲ್ಲಿ ಜುಲೈ 21 ರಂದು ಗಂಗಾಪೂಜೆ ಹಮ್ಮಿಕೊಳ್ಳಲಾಗಿದೆ ಎಂದು ಮಾಜಿ ಸಚಿವ ಎಸ್.ಕೆ ಬೆಳ್ಳುಬ್ಬಿ ಹೇಳಿದರು. ಪಟ್ಟಣದ ತಮ್ಮ ಸ್ವಗ್ರಹದಲ್ಲಿ ಪತ್ರಿಕಾಗೋಷ್ಠಿ ಹಮ್ಮಿಕೊಂಡು ಮಾತನಾಡಿದ ಅವರು ಪ್ರತಿ ವರ್ಷದಂತೆ ಈ ವರ್ಷವು ಕೂಡ ಕೃಷ್ಣೆಯ ಉಗಮಸ್ಥಾನದಲ್ಲಿ ರೈತ ಬಾಂಧವರೊಂದಿಗೆ ಗಂಗಾ ಪೂಜೆ ಸಲ್ಲಿಸಲಾಗುವುದು.

ಜುಲೈ 20 ರಂದು ವಿಜಯಪುರ ಪ್ರವಾಸಿ ಮಂದಿರದಿಂದ ಪ್ರಯಾಣ ಬೆಳೆಸಲಾಗುವುದು ಆಸಕ್ತರು ಗಂಗಾಪೂಜೆಯಲ್ಲಿ ಪಾಲ್ಗೊಳ್ಳಬಹುದು ಎಂದು ಅವರು ಹೇಳಿದರು.

ಆಸಕ್ತರು ದೂ:9845769528, 9922815920, 8861352207 ಸಂಖ್ಯೆಗಳಿಗೆ ಸಂಪರ್ಕಿಸಬಹುದು ಎಂದು ಅವರು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಸಿದ್ಧರಾಮ ಕಾಖಂಡಕಿ, ಪ.ಪಂ ಮಾಜಿ ಅಧ್ಯಕ್ಷರಾದ ಕಲ್ಲಪ್ಪ ಸೊನ್ನದ, ವಿರೂಪಾಕ್ಷಿ ಕೋಲಕಾರ, ಶೇಕು ಗಾಣಗೇರ, ಪ.ಪಂ ಸದಸ್ಯರಾದ ಶ್ರೀಶೈಲ ಅಥಣಿ, ಬಾಬು ಬಜಂತ್ರಿ, ಅಶೋಕ ಗಿಡ್ಡಪ್ಪಗೋಳ, ಈರಪ್ಪ ಜಿಡ್ಡಿಬಾಗಿಲ, ಆನಂದ ಬೀಷ್ಟಗೊಂಡ ಹಾಗೂ ಇನ್ನಿತರರು ಇದ್ದರು.

# ಅನಾಮಧೇಯ ಮಹಿಳೆ ಶವ ಪತ್ತೆ

**ಕೊಪ್ಪಳ** : ಜಿಲ್ಲೆಯ ಗಂಗಾವತಿಯ ತಾಲ್ಲೂಕಿನ ವಿರುಪಾಪುರ ಗಡ್ಡಿಯ ನದಿಯ ಅಡಕಲ್ಲು ಗುಂಡಿನ ಹತ್ತಿರ ಅನಾಮಧೇಯ ಮಹಿಳೆಯ ಶವ ಪತ್ತೆಯಾಗಿದ್ದು, ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:21/2024 ಕಲಂ 194(3)(6) ಬಿ.ಎನ್.ಎಸ್.ಎಸ್ 2023 ಅಡಿ ಗಂಗಾವತಿಯ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



2024ರ ಜುಲೈ 03 ರಂದು ವಿರುಪಾಪುರ ಗಡ್ಡಿಯ ನದಿಯ ಅಡಕಲ್ಲು ಗುಂಡಿನ ಹತ್ತಿರ ಅನಾಮಧೇಯ ಮಹಿಳೆಯ ಶವ ಕಂಡು ಬಂದ ಹಿನ್ನೆಲೆಯಲ್ಲಿ ವಿರುಪಾಪೂರು ಗ್ರಾಮದ ಪರಶುರಾಮ ಎಂಬುವರು ಗಂಗಾವತಿಯ ಗ್ರಾಮೀಣ ಪೊಲೀಸ್ ಠಾಣೆಗೆ ಮಾಹಿತಿ ನೀಡಿರುತ್ತಾರೆ. ಈ ಮಹಿಳೆಯು ಸುಮಾರು 15 ರಿಂದ 20 ದಿನಗಳ ಹಿಂದೆ ಬಿದ್ದಿರುವಂತೆ ಮಹಿಳೆಯ ದೇಹದ ಕೆಳಗಿನ ಭಾಗ ಕೈ.ಕಾಲುಗಳು ಹಾಗೂ ಇತರೆ ಕಡೆಗಳಲ್ಲಿ ಯಾವುದೋ ಪ್ರಾಣಿ ತಿಂದಂತೆ ಮತ್ತು ಶವವು ಸಂಪೂರ್ಣ ಕೊಳೆತಿದೆ.

ಮೃತ ಮಹಿಳೆಯ ಎಡಗೈ ಮೇಲೆ ಅಮ್ಮ ಅಂತಾ ಹಚ್ಚೆ ಇದ್ದು, ಈ ಮೃತ ಮಹಿಳೆಯ ಸಂಬಂಧಿಕರು ಹಾಗೂ ವಾರಸುದಾರರಿದ್ದಲ್ಲಿ ಹತ್ತಿರದ ಪೊಲೀಸ್ ಠಾಣೆಗೆ ಅಥವಾ ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆ ಪಿಐ ದೂ.ಸಂ: 08533-230854, ಮೊ.ಸಂ: 9480803730, ಎಸ್‌ಪಿ ಕಚೇರಿ ದೂ.ಸಂ: 08539-230111 ಗೆ ಸಂಪರ್ಕಿಸಿ ಮಾಹಿತಿ ನೀಡಬೇಕು ಎಂದು ಗಂಗಾವತಿ ಗ್ರಾಮೀಣ ಪೊಲೀಸ್ ಠಾಣೆಯ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವೃಕ್ಷೋಥಾನ್ ಹೆರಿಟೇಜ್ ರನ್-2020 ಪೋಸ್ಟರ್ ಬಿಡುಗಡೆ

**ವಿಜಯಪುರ** : ಈ ಬಾರಿ ವೃಕ್ಷೋತ್ಥಾನ್ ಹೆರಿಟೇಜ್ ರನ್ ಮುಂಬರುವ ಡಿಸೆಂಬರ್ 22 ರಂದು ನಗರದಲ್ಲಿ ನಡೆಯಲಿದೆ ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ತಿಳಿಸಿದ್ದಾರೆ. ಶುಕ್ರವಾರ ವೃಕ್ಷೋತ್ಥಾನ್ ಹೆರಿಟೇಜ್ ರನ್-2024 ಸಮಿತಿ ಪದಾಧಿಕಾರಿಗಳ ಸಮ್ಮುಖದಲ್ಲಿ ನಡೆಯಲಿರುವ ಈ ವರ್ಷದ ವೃಕ್ಷೋಥಾನ್ ಹೆರಿಟೇಜ್ ರನ್-2024 ಪೊಸ್ಟರ್‌ನ್ನು ಬಿಡುಗಡೆ ಮಾಡಿ ಅವರು ಮಾತನಾಡಿದರು.



ಕಳೆದ ವರ್ಷ ನಡೆದ ಮ್ಯಾರಾಥಾನ್‌ನಲ್ಲಿ 10 ಸಾವಿರಕ್ಕೂ ಹೆಚ್ಚು ಜನ ಪಾಲ್ಗೋಂಡಿದ್ದರು. ಈ ಬಾರಿ ಸುಮಾರು 15 ಸಾವಿರಕ್ಕೂ ಹೆಚ್ಚು ಜನ ಪಾಲ್ಗೋಳ್ಳುವ ನಿರೀಕ್ಷೆಯಿದೆ ಎಂದು ತಿಳಿಸಿದರು. ಕಳೆದ ಬಾರಿ ನಡೆದ ಮ್ಯಾರಾಥಾನ್‌ನಿಂದಾಗಿ ದೇಶಾದ್ಯಂತ ವಿಜಯಪುರ ಜಿಲ್ಲೆ ಮತ್ತು ಇಲ್ಲಿರುವ ಪ್ರಾಚೀನ ಸ್ಮಾರಕಗಳು ಹಾಗೂ ಇಲ್ಲಿನ ಆಯೋಜನೆ ಗಮನ ಸೆಳೆದಿದ್ದು, ಎಲ್ಲರಿಂದಲೂ ಶ್ಲಾಘನೆ ವ್ಯಕ್ತವಾಗಿದೆ. ಈ ಬಾರಿ ಮತ್ತಷ್ಟು ಅಚ್ಚುಕಟ್ಟಾಗಿ ಕಾರ್ಯಕ್ರಮ ನಡೆಯಲಿದೆ. ಇದರಲ್ಲಿ ಪಾಲ್ಗೊಳ್ಳುವವರು ಈಗಿನಿಂದಲೇ ತಯಾರಿ ಆರಂಭಿಸಬೇಕು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ವೃಕ್ಷೋತ್ಥಾನ್ ಹೆರಿಟೇಜ್ ರನ್-2024 ಸಮಿತಿಯ ಪದಾಧಿಕಾರಿಗಳಾದ ಕೋಟಿವೃಕ್ಷ ಅಭಿಯಾನ ಸಂಚಾಲಕ ಡಾ. ಮುರುಗೇಶ ಪಟ್ಟಣಶೆಟ್ಟಿ, ಕೈಗಾರಿಕೆ ಸಚಿವರ ಸಾರ್ವಜನಿಕ ಸಂಪರ್ಕಾಧಿಕಾರಿ ಡಾ. ಮಹಾಂತೇಶ ಬಿರಾದಾರ, ಶಿವನಗೌಡ ಪಾಟಿಲ, ಸೋಮಶೇಖರ ಸ್ವಾಮಿ, ಸಂಕೇತ ಬಗಲಿ, ಸಂತೋಷ ಔರಸಂಗ, ವೀರೇಂದ್ರ ಗುಚ್ಚೆಟ್ಟಿ, ಡಾ. ರಾಜು ಯಲಗೊಂಡ, ಅಪ್ಪು ಭೈರಗೊಂಡ, ಚಂದ್ರಶೇಖರ ಶೆಟ್ಟಿ, ಅಮಿತ ಬಿರಾದಾರ, ನವೀದ ನಾಗಠಾಣ, ಆಕಾಶ ಚೌಕಿಮಠ, ಶಿವಾನಂದ ಯರನಾಳ, ಸೋಮು ಮಠ, ಸಮೀರ ಬಳಗಾರ, ಡಾ. ಪ್ರವೀಣ ಚೌರ ಮುಂತಾದವರು ಉಪಸ್ಥಿತರಿದ್ದರು.

# ಉಚಿತ ಕೌಶಲ್ಯಾಧಾರಿತ ತರಬೇತಿಗೆ ಅರ್ಜಿ ಆಹ್ವಾನ

**ಕೊಪ್ಪಳ** : ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದ ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆಯಿಂದ ಉಚಿತ ಕೌಶಲ್ಯಾಧಾರಿತ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

18 ರಿಂದ 45 ವಯೋಮಾನದ ಗ್ರಾಮೀಣ ಭಾಗದ ನಿರುದ್ಯೋಗಿ ಯುವಕರಿಗಾಗಿ ಆಗಸ್ಟ್ ತಿಂಗಳಿನಲ್ಲಿ ರೆಫ್ರಿಜರೆಟರ್ ಅಂಡ್ ಏರ್ ಕಂಡೀಷನ್ನಿಂಗ್, ಟ್ರಾವೆಲ್ ಅಂಡ್ ಟೂರಿಸ್ಟ್ ಗೈಡ್ ಹಾಗೂ ಯುವತಿಯರಿಗಾಗಿ ಬ್ಯೂಟಿ ಪಾರ್ಲರ್ ಮ್ಯಾನೇಜಮೆಂಟ್ ಉಚಿತ ತರಬೇತಿಯನ್ನು ನೀಡಲಾಗುತ್ತಿದ್ದು, ತರಬೇತಿ ಅವಧಿಯಲ್ಲಿ ಊಟ ಹಾಗೂ ವಸತಿಯು ಉಚಿತವಾಗಿರುತ್ತದೆ.

ಅಭ್ಯರ್ಥಿಗಳು ತಮ್ಮ ಹೆಸರು, ವಿಳಾಸಗಳನ್ನು ನೋಂದಾಯಿಸಲು ಜುಲೈ 20 ಕೊನೆಯ ದಿನವಾಗಿದ್ದು, ಮೊದಲು ಬಂದವರಿಗೆ ಹಾಗೂ ಗ್ರಾಮೀಣ ಭಾಗದವರಿಗೆ ಮೊದಲ ಆದ್ಯತೆ ನೀಡಲಾಗುವುದು. ತರಬೇತಿಯಲ್ಲಿ ಕೌಶಲ್ಯ, ಸಾಫ್ಟ್ ಸ್ಕಿಲ್ಸ್, ಯೋಗ ತರಬೇತಿ ಹಾಗೂ ಬ್ಯಾಂಕ್‌ನಿಂದ ಸಾಲ ಪಡೆದು ಸ್ವ-ಉದ್ಯೋಗ ಪ್ರಾರಂಭಿಸಲು ಬೇಕಾಗುವ ಜ್ಞಾನ, ಸರಕಾರಿ ಯೋಜನೆಗಳು ಮತ್ತು ಯೋಜನಾ ವರದಿ ತಯಾರಿಕೆ ಇನ್ನೇತರ ಮಾಹಿತಿಯನ್ನು ಉಚಿತವಾಗಿ ನೀಡಲಾಗುವುದು.

ತರಬೇತಿಯಲ್ಲಿ ಭಾಗವಹಿಸಲು ಇಚ್ಛಿಸುವ ಆಸಕ್ತರು ನಿರ್ದೇಶಕರು, ಕೆನರಾ ಬ್ಯಾಂಕ್ ದೇಶಪಾಂಡೆ ಆರ್‌ಸೆಟ್ ಸಂಸ್ಥೆ, ಹಳಿಯಾಳ, ಉತ್ತರ ಕನ್ನಡ ಜಿಲ್ಲೆ ಈ ವಿಳಾಸಕ್ಕೆ, ದೂ.ಸಂ:8217236973, 9483485489, 9482188780, ಗೆ ಸಂಪರ್ಕಿಸಬಹುದು ಎಂದು ಸಂಸ್ಥೆಯ ಪ್ರಕಟಣೆ ತಿಳಿಸಿದೆ.

# ಸೂಕ್ತ ಬಸ್ ಸೌಲಭ್ಯ ಕಲ್ಪಿಸಲು ಆಗ್ರಹಿಸಿ ಸಚಿವ ಎಂ.ಬಿ. ಪಾಟೀಲರಿಗೆ ವಿದ್ಯಾರ್ಥಿಗಳಿಂದ ಮನವಿ ಸಲ್ಲಿಕೆ

**ವಿಜಯಪುರ** : ವಿದ್ಯಾರ್ಥಿಗಳಿಗೆ ಸಮರ್ಪಕ ಬಸ್ ಸೌಲಭ್ಯ ಒದಗಿಸಬೇಕು ಮತ್ತು ಶಾಲಾ ಕಟ್ಟಡಗಳ ದುರಸ್ಥಿ ಮತ್ತು ಹಾಸ್ಟೇಲುಗಳಲ್ಲಿ ಸೂಕ್ತ ಮೂಲಭೂತ ಸೌಕರ್ಯ ಕಲ್ಪಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಕಳೆದ ಕೆಡಿಪಿ ಸಭೆಯಲ್ಲಿಯೇ ಸ್ಪಷ್ಟ ಸೂಚನೆ ನೀಡಿದ್ದೇನೆ ಎಂದು ಕೈಗಾರಿಕೆ, ಮೂಲ ಸೌಕರ್ಯ ಅಭಿವೃದ್ಧಿ ಹಾಗೂ ಜಿಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ.




ಶುಕ್ರವಾರ ಎಬಿವಿಪಿ ಕಾರ್ಯಕರ್ತರಿಂದ ಮನವಿ ಸ್ವೀಕರಿಸಿ ಅವರು ಮಾತನಾಡಿದರು.

ಗ್ರಾಮೀಣ ಮತ್ತು ನಗರ ಭಾಗದ ಶಾಲೆ ಹಾಗೂ ಕಾಲೇಜುಗಳ ವಿದ್ಯಾರ್ಥಿಗಳಿಗೆ ಸಮಯಕ್ಕೆ ಸರಿಯಾಗಿ ಬಸ್ ಸೌಲಭ್ಯ ಒದಗಿಸುವಂತೆ ಈಗಾಗಲೇ ಸೂಚನೆ ನೀಡಿದ್ದೇನೆ. ಅಲ್ಲದೇ, ಶಿಥಿಲಾವಸ್ಥೆಯಲ್ಲಿರುವ ಶಾಲಾ ಕಟ್ಟಡಗಳ ಸಮೀಕ್ಷೆ ನಡೆಸಿ ವರದಿ ಸಲ್ಲಿಸಬೇಕು. ತುರ್ತಾಗಿ ಕ್ರಮ ಕೈಗೊಳ್ಳಬೇಕಿರುವ ಕಡೆ ಕೂಡಲೇ ಕೆಲಸ ಮಾಡುವಂತೆ ಸೂಚನೆ ನೀಡಲಾಗಿದೆ. ಅಲ್ಲದೇ, ಹಾಸ್ಟೇಲ್‌ಗಳಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ಪ್ರವೇಶಾತಿ ನೀಡಬೇಕು. ಅಲ್ಲಿ ಸೂಕ್ತ ಮೂಲ ಸೌಲಭ್ಯ ಒದಗಿಸಬೇಕು. ಜೊತೆಗೆ, ಹೆಚ್ಚುವರಿ ಹಾಸ್ಟೇಲ್‌ಗಳ ಅಗತ್ಯತೆ ಕುರಿತು ಕೂಡ ಸಮಗ್ರ ವರದಿ ಸಲ್ಲಿಸುವಂತೆ ಸೂಚನೆ ನೀಡಲಾಗಿದೆ. ಈಗ ತುರ್ತು ಅಗತ್ಯವಿರುವ ಕೆಲಸಗಳನ್ನು ಕೂಡಲೇ ಮಾಡುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಾಗಿ ಸೂಚನೆ ನೀಡಿದ್ದೇನೆ. ಅಲ್ಲದೇ, ಮುಂದಿನ ಕೆಡಿಪಿ ಸಭೆಯಲ್ಲಿ ಈ ಕುರಿತು ಪರಿಶೀಲನೆ ಕೂಡ ನಡೆಸುತ್ತೇನೆ ಎಂದು ಅವರು ತಿಳಿಸಿದರು.

ವಿದ್ಯಾರ್ಥಿ ಸಂಘಟನೆಗಳು ನಿಷ್ಪಕ್ಷಪಾತವಾಗಿ ಹೋರಾಟ ಮಾಡಬೇಕು ಎಂದು ಕಿವಿಮಾತು ಹೇಳಿದ ಸಚಿವರು, ನೀಟ್‌ನಲ್ಲಿಯೂ ಕೂಡ ಸಾಕಷ್ಟು ಅನ್ಯಾಯವಾಗಿದ್ದು, ಈ ಜ್ವಲಂತ ಸಮಸ್ಯೆಯ ಕುರಿತೂ ಹೋರಾಟದ ಮೂಲಕ ಗಮನ ಸೆಳೆಯಬೇಕು. ವಿದ್ಯಾರ್ಥಿಗಳ ಸರ್ವಾಂಗೀಣ ಅಭಿವೃದ್ಧಿಗೆ ಸರಕಾರ ಬದ್ಧವಾಗಿದೆ. ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳಿಗೆ ಆಗಿರುವ ಶೈಕ್ಷಣಿಕ ಸಮಸ್ಯೆಗಳ ಕುರಿತು ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಯಾರೂ ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದರು.

ಈ ಸಂದರ್ಭದಲ್ಲಿ ಎಬಿವಿಪಿ ಮುಖಂಡ ಸಚಿವ ಕುಳಗೇರಿ, ಕಾರ್ಯಕರ್ತರಾದ ಸಂದೀಪ ಅರಳಿಗುಂಡಿ, ಶ್ರೀಕಾಂತ, ಕವಿತಾ ಬಿರಾದಾರ, ಮಲ್ಲಿಕಾರ್ಜುನ ಮಾಳಿ ಮುಂತಾದವರು ಉಪಸ್ಥಿತರಿದ್ದರು.

# ಕೊಪ್ಪಳ: ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕಲಾವಿದರಿಗೆ ಮಾಸಾಶನ: ಅರ್ಜಿ ಆಹ್ವಾನ

**ಕೊಪ್ಪಳ** : ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕಲಾವಿದರಿಗೆ ಮಾಸಾಶನಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ನಾಡು-ನುಡಿಯ ಸೇವೆಗೆ ಕಲೆ, ಸಂಸ್ಕೃತಿ, ಮತ್ತು ಸಾಹಿತ್ಯ ಕ್ಷೇತ್ರಗಳಲ್ಲಿ ಗಣನೀಯ ಸೇವೆ ಸಲ್ಲಿಸಿ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕಲಾವಿದರಿಗೆ ಇಲಾಖೆಯಿಂದ ನೀಡಲಾಗುವ ಮಾಸಾಶನದ ಸೌಲಭ್ಯ ದೊರಕಿಸಲು ಜಿಲ್ಲಾ ಹಂತದಲ್ಲಿ ಅರ್ಹರನ್ನು ಗುರುತಿಸಿ ಮಾಸಾಶನವನ್ನು ನಿಯಮಾನುಸಾರ ನೀಡಲು ಕ್ರಮವಹಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರು ಸೂಚಿಸಿರುತ್ತಾರೆ. ಅದರಂತೆ ಕೊಪ್ಪಳ ಜಿಲ್ಲೆಯಲ್ಲಿರುವ 58 ವರ್ಷ ಮೇಲ್ಪಟ್ಟ ಆರ್ಥಿಕವಾಗಿ ಸಂಕಷ್ಟದಲ್ಲಿರುವ ಕಲಾವಿದರು ಹಾಗೂ 40ವರ್ಷ ಮೇಲ್ಪಟ್ಟ ವಿಶೇಷ ಚೇತನ ಕಲಾವಿದರು ಸಹ ಜನ್ಮದಿನಾಂಕ ದಾಖಲೆಗಳೊಂದಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಕೊಪ್ಪಳ ಕಚೇರಿಯಲ್ಲಿ ಅರ್ಜಿ ಪಡೆದು ಮಾಸಾಶನಕ್ಕೆ ಅರ್ಜಿ ಸಲ್ಲಿಸಬಹುದಾಗಿದೆ.

ಅರ್ಜಿ ಪಡೆದ ಕಲಾವಿದರು ನಿಯಮಾನುಸಾರ ದಾಖಲೆಗಳನ್ನು ಸಲ್ಲಿಸಿದಲ್ಲಿ ಮಾಸಾಶನಕ್ಕೆ ಶಿಫಾರಸ್ಸು ಮಾಡಲಾಗುವುದು ಎಂದು ಕೊಪ್ಪಳ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಹಳ್ಳಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಾಗಲಕಾಯಿಯ ಆರೋಗ್ಯಕಾರಿ ಪ್ರಯೋಜನಗಳು

ಹಾಗಲಕಾಯಿ ಹಲವು ರೀತಿಯಲ್ಲಿ ನಮ್ಮ ದೇಹಕ್ಕೆ ಉತ್ತಮವಾಗಿದೆ. ಪ್ರಮುಖವಾಗಿ ಇದರ ನಿಯಮಿತ ಸೇವನೆಯಿಂದ ಯಕೃತ್‌ನಲ್ಲಿ ಸಂಗ್ರಹವಾಗಿದ್ದ ವಿಷಕಾರಿ ವಸ್ತುಗಳನ್ನು ಹೊರಹಾಕಲು ಸಾಧ್ಯವಾಗುತ್ತದೆ. ಇದರ ನಿಯಮಿತ ಸೇವನೆಯಿಂದ ಮುಖದ ಮೊಡವೆಗಳೂ ಕಲೆ ನೀಡದೇ ಮಾಗಲು ಸಾಧ್ಯವಾಗುತ್ತದೆ.



ಟೈಪ್ 2 ಮಧುಮೇಹವನ್ನು ಗುಣಪಡಿಸಲು ಸಮರ್ಥವಿರುವ ಸಿದ್ಧ ಆಹಾರವೆಂದರೆ ಅದು ಪ್ರಥಮವಾಗಿ ಹಾಗಲಕಾಯಿ, ಆದರೆ ಇದರ ಕಹಿರುಚಿಯನ್ನು ಸಹಿಸುವ ಮನಸ್ಸಾಗಬೇಕು ಅಷ್ಟೇ. ಹಾಗಲಕಾಯಿಯನ್ನು ತರಕಾರಿಯ ರೂಪದಲ್ಲಿ ಸೇವಿಸುವುದಕ್ಕಿಂತ ಹೆಚ್ಚು ಪರಿಣಾಮವನ್ನು ಅದರ ಜ್ಯೂಸ್ ಮಾಡಿಕೊಂಡು ಕುಡಿಯುವ ಮೂಲಕ ಪಡೆಯಬಹುದು.

ರಕ್ತದಲ್ಲಿರುವ ಸಕ್ಕರೆಯ ಅಂಶವನ್ನು ತಗ್ಗಿಸುತ್ತದೆ

ಪ್ರತಿದಿನ ಬೆಳಿಗ್ಗೆ ಒಂದು ಲೋಟ ಹಾಗಲಕಾಯಿಯ ರಸವನ್ನು ಖಾಲಿಹೊಟ್ಟೆಯಲ್ಲಿ ಕುಡಿದರೆ ರಕ್ತದಲ್ಲಿ ಹೆಚ್ಚಾಗಿರುವ ಸಕ್ಕರೆಯ ಅಂಶ ಮೂರೇ ದಿನದಲ್ಲಿ ತಹಬಂದಿಗೆ ಬರುತ್ತದೆ. ವಾಸ್ತವಾಗಿ ರಕ್ತದಲ್ಲಿನ ಸಕ್ಕರೆ ಉಪಯೋಗಿಸಲ್ಪಡದೇ ವಿಸರ್ಜಿಸಲಾಗಲು ಇನ್ಸುಲಿನ್ ಪ್ರಮಾಣ ಮಹತ್ವದ ಪಾತ್ರ ವಹಿಸುತ್ತದೆ. ಈ ಪೋಷಕಾಂಶಗಳು ಇನ್ಸುಲಿನ್ ಕೊರತೆಯಾಗದಂತೆ ನೋಡಿಕೊಳ್ಳುವುದೇ ಹಾಗಲಕಾಯಿಯ ಈ ಸಾಮರ್ಥ್ಯಕ್ಕೆ ಕಾರಣವಾಗಿದೆ.

ಜೀರ್ಣಕ್ರಿಯೆಯಲ್ಲಿ ನೆರವಾಗುತ್ತದೆ: ಕೆಲವೊಮ್ಮೆ ಆಹಾರ ಜೀರ್ಣಗೊಳ್ಳಲು ಸಾಮಾನ್ಯಕ್ಕಿಂತಲೂ ಹೆಚ್ಚಿನ ಸಮಯಾವಕಾಶ ತೆಗೆದುಕೊಳ್ಳುವುದರಿಂದ ಹೊಟ್ಟೆಯಲ್ಲಿಯೇ ಉಳಿದು ಹಲವು ವಾಯುಗಳು ಉತ್ಪತ್ತಿಯಾಗಿ ಉರಿ ತರಿಸುತ್ತವೆ. ಅಜೀರ್ಣ ವ್ಯಾಧಿ ಎಂದು ಕರೆಯಲಾಗುವ ಈ ತೊಂದರೆಗೆ ಹಾಗಲಕಾಯಿಯ ರಸ ಅತ್ಯಂತ ಪರಿಣಾಮಕಾರಿಯಾಗಿದೆ. ಈ ರಸ ಹೊಟ್ಟೆಯಲ್ಲಿಳಿದ ಬಳಿಕ ಜೀರ್ಣರಸಗಳನ್ನು ಅಗತ್ಯ ಪ್ರಮಾಣದಲ್ಲಿ ಸ್ರವಿಸಲು ಜಠರಕ್ಕೆ ಪ್ರಚೋದನೆ ನೀಡುತ್ತದೆ. ಪರಿಣಾಮವಾಗಿ ಹುಳಿತೇಗು, ಗ್ಯಾಸ್ಟ್ರಿಕ್, ಹೊಟ್ಟೆಯ ಹುಣ್ಣು ಮೊದಲಾದ ತೊಂದರೆಗಳಿಂದ ಕಾಪಾಡಿದಂತಾಗುತ್ತದೆ. ವಾರಕ್ಕೊಮ್ಮೆ ಬೆಳಿಗ್ಗೆದ್ದ ಕೂಡಲೇ ಖಾಲಿಹೊಟ್ಟೆಯಲ್ಲಿ ಒಂದು ಲೋಟ ಹಾಗಲಕಾಯಿಯ ರಸವನ್ನು ಸೇವಿಸುವುದರಿಂದ ಆರೋಗ್ಯ ಉತ್ತಮಗೊಳ್ಳುತ್ತದೆ.

ಕಣ್ಣಿನ ದೃಷ್ಟಿಯನ್ನು ಉತ್ತಮಗೊಳಿಸುತ್ತದೆ: ಹಾಗಲಕಾಯಿಯ ರಸದಲ್ಲಿ ಬೀಟಾ-ಕ್ಯಾರೋಟೀನ್ ಮತ್ತು ವಿಟಮಿನ್ ಎ ಪೋಷಕಾಂಶಗಳು ಹೇರಳವಾಗಿರುವುದರಿಂದ ಕಣ್ಣಿಗೆ ಅಗತ್ಯವಾದ ಪೋಷಕಾಂಶಗಳು ದೊರೆತು ಕಣ್ಣಿನ ತೊಂದರೆಗಳಿಂದ ರಕ್ಷಣೆ ನೀಡಿದಂತಾಗುತ್ತದೆ. ಅಲ್ಲದೇ ಉತ್ತಮ ಪ್ರಮಾಣದಲ್ಲಿರುವ ವಿಟಮಿನ್ ಸಿ ಮತ್ತು ಆಂಟಿ ಆಕ್ಸಿಡೆಂಟುಗಳು ಮಧುಮೇಹದ ಕಾರಣದಿಂದಾಗಿ ಉತ್ಪತ್ತಿಯಾಗುವ ದೃಷ್ಟಿದೋಷದಿಂದ ಕಣ್ಣುಗಳನ್ನು ಕಾಪಾಡುತ್ತವೆ. ಹಾಗಲಕಾಯಿಯ ನಿಯಮಿತ ಸೇವನೆಯಿಂದ ಕಣ್ಣುಗಳ ಉತ್ತಮ ಆರೋಗ್ಯವನ್ನು ಕಾಪಾಡಿಕೊಂಡು ಬರಲು ಸಾಧ್ಯವಾಗುತ್ತದೆ.

ಕೆಟ್ಟ ಕೊಲೆಸ್ಟಾಲ್ ಕಡಿಮೆಮಾಡುತ್ತದೆ: ಹಾಗಲಕಾಯಿಯಲ್ಲಿ ಫೈಟೋನ್ಯೂಟ್ರಿಯೆಂಟ್‌ಗಳೆಂಬ ಆಂಟಿ ಆಕ್ಸಿಡೆಂಟುಗಳಿದ್ದು ಇವು ಕೆಟ್ಟ ಕೊಲೆಸ್ಟಾಲ್ ಕಣಗಳನ್ನು ತಮ್ಮೊಂದಿಗೆ ಅಂಟಿಸಿಕೊಂಡು ಹೋಗುವ ಕ್ಷಮತೆ ಪಡೆದಿವೆ. ಹಾಗಲಕಾಯಿಯನ್ನು ತರಕಾರಿಯ ರೂಪದಲ್ಲಿ ಆಲಿವ್ ಎಣ್ಣೆಯೊಡನೆ ಸೇವಿಸಿದರೆ ಕೊಂಚ ಕಹಿ ಎನಿಸಿದರೂ ನಿಮ್ಮ ದೇಹದಲ್ಲಿರುವ ಕೆಟ್ಟ ಕೊಲೆಸ್ಟ್ರಾಲ್ ನಿವಾರಿಸುವ ಮೂಲಕ ಆರೋಗ್ಯವನ್ನು ವೃದ್ಧಿಸುತ್ತದೆ.

ರಕ್ತವನ್ನು ಶುದ್ಧೀಕರಿಸುತ್ತದೆ: ಪ್ರತಿದಿನ ಬೆಳಿಗ್ಗೆ ಖಾಲಿಹೊಟ್ಟೆಯಲ್ಲಿ ಒಂದು ಲೋಟ ಹಾಗಲಕಾಯಿ ರಸವನ್ನು ಸೇವಿಸುವುದರಿಂದ ರಕ್ತ ಶುದ್ಧಿಗೊಂಡು ಚರ್ಮದ ವಿವಿಧ ತೊಂದರೆಗಳು ಮಾಯವಾಗಿ ಕಾಂತಿಯುಕ್ತ ಚರ್ಮ ಪಡೆಯಲು ಸಾಧ್ಯವಾಗುತ್ತದೆ. ಶುದ್ಧೀಕರಣಗೊಂಡ ರಕ್ತದ ಮೂಲಕ ಇಡಿಯ ಶರೀರ ಆರೋಗ್ಯದಿಂದ ಕಂಗೊಳಿಸುತ್ತದೆ.

ಮೊಡವೆಗಳಿಗೆ: ಹಾಗಲಕಾಯಿಯ ಸೇವನೆಯು ಮೊಡವೆಗಳ ನಿವಾರಣೆಗೆ ಸಹಕಾರಿಯಾಗಿದೆ ಮಾತ್ರವಲ್ಲದೇ ಆಳವಾದ ಚರ್ಮದ ಸೋಂಕುಗಳಿಗೂ ಶಮನಕಾರಿಯಾಗಿದೆ. ಹಾಗಲಕಾಯಿಯ ರಸವನ್ನು ನಿಂಬೆ ಹಣ್ಣಿನ ರಸದೊಂದಿಗೆ ಬೆರೆಸಿ, ಪ್ರತಿದಿನ ಖಾಲಿ ಹೊಟ್ಟೆಗೆ 6 ತಿಂಗಳುಗಳ ಕಾಲ ಸೇವಿಸಿರಿ ಇಲ್ಲವೇ ನಿಮ್ಮ ನಿರೀಕ್ಷಿತ ಫಲಿತಾಂಶ ದೊರೆಯುವವರೆಗೆ ಸೇವನೆಯನ್ನು ಮುಂದುವರೆಸಿರಿ.

ಹಾಗಲಕಾಯಿ ಜ್ಯೂಸ್ ಮಾಡುವ ವಿಧಾನ: ತಾಜಾ ಹಾಗಲಕಾಯಿಯನ್ನು ಚೆನ್ನಾಗಿ ತೊಳೆದು ಅದರ ಮೇಲ್ಭಾಗದ ಸಿಪ್ಪೆಯನ್ನು ತೆಗೆಯಿರಿ ಹಾಗೂ ಇದನ್ನು ಮಧ್ಯಭಾಗದಲ್ಲಿ ಕತ್ತರಿಸಿ ಬೀಜವನ್ನು ಚಮಚದ ಮೂಲಕ ತೆಗೆಯಿರಿ. ಸಿಪ್ಪೆಯ ಕಹಿಯನ್ನು ಸಹಿಸಿಕೊಳ್ಳಬಲ್ಲಿರೆಂದಾದಲ್ಲಿ ಅದನ್ನು ತೆಗೆಯುವ ಅಗತ್ಯವಿಲ್ಲ. ಅನೇಕರು ಹಾಗಲಕಾಯಿಯ ಮೇಲ್ಭಾಗದ ಸಿಪ್ಪೆಯನ್ನು ತೆಗೆಯುವ ಗೋಜಿಗೇ ಹೋಗುವುದಿಲ್ಲ. ಹಾಗಲಕಾಯಿಯನ್ನು ಸಣ್ಣದಾಗಿ ತುಂಡರಿಸಿಕೊಳ್ಳಿ. ನಂತರ ಇದನ್ನು ಒಂದು ಪಾತ್ರೆಗೆ ಹಾಕಿ ಮತ್ತು ನೀರಿನಲ್ಲಿ 30 ನಿಮಿಷಗಳ ಕಾಲ ಹಾಗಲಕಾಯಿಯನ್ನು ಮುಳುಗಿಸಿಡಿ. ಬೇಕಾದಲ್ಲಿ ಸ್ವಲ್ಪ ಉಪ್ಪು ಅಥವಾ ಲಿಂಬೆ ರಸವನ್ನು ಸೇರಿಸಿ ಇದರಿಂದ ಇದರ ಕಹಿ ನಿವಾರಣೆಯಾಗುತ್ತದೆ. ಅನಂತರ ಇವುಗಳನ್ನು ಮಿಕ್ಸರ್ ನಲ್ಲಿ ಹಾಕಿರಿ ಜೊತೆಗೆ ಅದಕ್ಕೆ ಅಗತ್ಯವಿದ್ದಷ್ಟು ನೀರನ್ನು ಸೇರಿಸಿರಿ.

# ಬೊಜ್ಜು ಕರಗಿಸಲು ಸೀಬೆ ಮದ್ದು

ಸೀಬೆ ಎಂದರೆ ಎಲ್ಲರಿಗೂ ಇಷ್ಟ. ಈ ಹಣ್ಣು ರುಚಿಯಾಗಿರುತ್ತದೆ. ಸೀಬೆಗೆ ಇನ್ನೊಂದು ಹೆಸರು ಪೇರಲ. ಮಾಗಿದಾಗ ವಿಶಿಷ್ಟ ಪರಿಮಳ ಹರಡುತ್ತದೆ. ಇದು ನೋಡಲೂ ಸಹ ಆಕರ್ಷಕವಾಗಿರುತ್ತದೆ. ಶ್ರಾವಣ ಬಂತು ಎಂದರೆ ಎಲ್ಲಿ ನೋಡಿದರೂ ಸೀಬೆಯೇ. ದೋರೆಗಾಯಿ ಇದ್ದಾಗ ಸೀಬೆಯಲ್ಲಿ ಸಿಹಿ, ಹುಳಿ ಮತ್ತು ಒಗರು ಮಿಳಿತಗೊಂಡಿದ್ದು ತಿನ್ನಲು ಬಲು ರುಚಿಯಾಗಿರುತ್ತದೆ.



ಸೀಬೆಗೆ ಸಂಸ್ಕೃತದಲ್ಲಿ ಅಮೃತಫಲಂ ಎಂದರೆ, ಹಿಂದಿಯಲ್ಲಿ ಅಮ್ರೂದ್, ತೆಲುಗಿನಲ್ಲಿ ಜಾಮ, ತಮಿಳಿನಲ್ಲಿ ಕೊಯ್ಯಾಪಳಂ ಹಾಗೂ ಇಂಗ್ಲಿಷ್‌ನಲ್ಲಿ ಗೋವಾ ಎಂದು ಕರೆಯುತ್ತಾರೆ. ಸೀಬೆ ಹಣ್ಣಿನಲ್ಲಿ ಶರೀರಕ್ಕೆ ಅಗತ್ಯವಿರುವ ವಿವಿಧ ಪೋಷಕಾಂಶಗಳು ಸಾಕಷ್ಟಿವೆ. ಹಣ್ಣು ದೊರೆಯುವ ಅವಧಿಯಲ್ಲಿ ಯಥೇಚ್ಛವಾಗಿ ಬಳಸಿ ಲಾಭ ಹೊಂದಬೇಕು. ಅತ್ಯಧಿಕ ಔಷಧೀಯ ಗುಣವಿರುವ ಇದು ಹಿತ್ತಲಗಿಡ. ಇದರ ಬೆಲೆಯೂ ಕಡಿಮೆಯಿದ್ದು, ಆರೋಗ್ಯಕ್ಕೆ ಹೆಚ್ಚು ಉಪಯುಕ್ತ. ಹಸಿರು ಕಾಯಿ ಒಗರಾಗಿರುತ್ತದೆ. ದೋರೆಗಾಯಿ ಹೆಚ್ಚು ರುಚಿಯಾಗಿರುತ್ತದೆ. ಅಧಿಕ ಪ್ರಮಾಣದ ಶರ್ಕರ ಪಿಷ್ಟಗಳ ಜೊತೆಗೆ ಪ್ರೋಟೀನು, ಸುಣ್ಣ, ರಂಜಕ, ಕಬ್ಬಿಣ ಹಾಗೂ ಕ್ಯಾಲೊರಿ ಸತ್ವಗಳಿರುತ್ತವೆ. 'ಸಿ' ಅನ್ನಾಂಗದ ಜೊತೆಗೆ ಇತರ ಅನ್ನಾಂಗಗಳು ಸ್ವಲ್ಪ ಮಟ್ಟಿಗೆ ಇರುತ್ತದೆ. ದೋರೆಗಾಯಿಗಳಲ್ಲಿ ಅಧಿಕ ಪೆಕ್ಟಿನ್ ಅಂಶವಿರುತ್ತದೆ.

ಸೀಬೆಹಣ್ಣನ್ನು ರುಚಿಗೋಸ್ಕರ ಇಲ್ಲವೇ ಆಹಾರವಾಗಿ ಬಳಸುವುದು ಮಾತ್ರವಲ್ಲ, ಅದು ಉತ್ತಮ ಔಷಧಿಯ ಗುಣ ಸಹ ಹೊಂದಿದೆ. ಅಧಿಕ ಪ್ರಮಾಣದ ಪ್ರೋಟೀನು ಇರುವ ಕಾರಣ ಮಾಂಸಖಂಡಗಳನ್ನು ಬಲಪಡಿಸಬಲ್ಲದು. ನಾರಿನ ಅಂಶ ಅಧಿಕವಿರುವ ಕಾರಣ ತಿಂದ ಆಹಾರ ಕರುಳುಗಳಲ್ಲಿ ಸುಲಭವಾಗಿ ಚಲಿಸುವಂತೆ ಮಾಡಬಲ್ಲದು. ಆದ್ದರಿಂದ ಮಲಬದ್ಧತೆಗೆ ಇದು ದಿವ್ಯೌಷಧ. ಈ ಉದ್ದೇಶಕ್ಕಾಗಿ ರಾತ್ರಿ ಊಟದ ನಂತರ ಪ್ರತಿ ನಿತ್ಯ ಒಂದೆರೆಡು ಹಣ್ಣುಗಳನ್ನು ತಿಂದಲ್ಲಿ ಮುಂಜಾನೆ ಸುಖ ವಿರೇಚನ ಸಾಧ್ಯ.

ಹಣ್ಣುಗಳಲ್ಲಿರುವ ಕಬ್ಬಿಣದ ಅಂಶ ರಕ್ತ ಶುದ್ಧಿಗೆ ಸಹಾಯಕ. ಇದು 'ಸಿ' ಅನ್ನಾಂಗದ ಒಳ್ಳೆಯ ಮೂಲವಾದ್ದರಿಂದ ಹಲ್ಲಿನ ಒಸಡುಗಳು ಗಟ್ಟಿಗೊಳ್ಳುತ್ತವೆ. ಹಾಗೂ ಸ್ಕರ್ವಿ ರೋಗವನ್ನು ದೂರ ಮಾಡಬಲ್ಲದು.

ಸೀಬೆಯಲ್ಲಿ ಬೇಟಾ ಕೆರಾಟಿನ್, ಪೊಟ್ಯಾಶಿಯಂ ಮತ್ತು ಫೈಬರ್ ಅಂಶ ಹೆಚ್ಚಾಗಿರುವುದರಿಂದ ಇದು ಹೆಚ್ಚು ಉಪಯೋಗಕಾರಿಯಾಗಿದ್ದು ರಕ್ತದಲ್ಲಿನ ಸಕ್ಕರೆ ಅಂಶ ಮತ್ತು ಕೊಲೆಸ್ಟ್ರಾಲ್ ನಿಯಂತ್ರಿಸುವ ಗುಣವನ್ನು ಹೊಂದಿದೆ ಹಾಗೂ ಹೃದಯದ ಸ್ವಾಸ್ಥ್ಯವನ್ನು ಕಾಪಾಡುತ್ತದೆ.

ತೂಕ ಕಡಿಮೆ ಮಾಡಿಕೊಳ್ಳಬೇಕೆಂದಿದ್ದರೆ ಸೀಬೆ ಹಣ್ಣು ಒಳ್ಳೆ ಆಯ್ಕೆ. ಸೀಬೆಯಲ್ಲಿ ಅವಶ್ಯಕ ಕಾರ್ಬೊಹೈಡ್ರೇಟ್ ಮತ್ತು ಫೈಬರ್ ಇರುವುದರಿಂದ ಬೊಜ್ಜನ್ನು ನಿಯಂತ್ರಿಸುತ್ತದೆ. ಸೀಬೆಯಲ್ಲಿ ಕೊಬ್ಬಿನಾಂಶ ಕೇವಲ 0.9 ಇದ್ದು, 84 ಕ್ಯಾಲೊರಿ ಮಾತ್ರ ಇರುತ್ತದೆ. ಸೇಬು ಹಣ್ಣಿಗೆ ಹೋಲಿಸಿದರೆ ಸೀಬೆಯಲ್ಲಿ ಶೇ 42 ರಷ್ಟು ಕಡಿಮೆ ಕ್ಯಾಲೊರಿ ಮತ್ತು ಶೇ.38 ರಷ್ಟು ಕಡಿಮೆ ಕೊಬ್ಬಿನಾಂಶವಿದೆ.

ಮಕ್ಕಳಿಗೆ ಕೆಲವರು ಈ ಹಣ್ಣನ್ನು ತಿನ್ನಲು ಕೊಡುವುದಿಲ್ಲ ಅದಕ್ಕೆ ಕಾರಣ ಅವು ಕೆಮ್ಮನ್ನುಂಟುಮಾಡುತ್ತವೆ ಎಂಬ ಶಂಕೆ. ಆದರೆ ಇದು ತಪ್ಪು. ಎಳೆಯ ಮಕ್ಕಳಿಗೆ ಸಾಕಷ್ಟು ಹಣ್ಣನ್ನು ಕೊಡುತ್ತಿದ್ದಲ್ಲಿ 'ಸಿ' ಅನ್ನಾಂಗದ ಅಭಾವ ತಾನೇ ತಾನಾಗಿ ನಿವಾರಣೆಯಾಗುತ್ತದೆ. ನುಣ್ಣಗೆ ಕುಟ್ಟಿ ಪುಡಿಮಾಡಿದ ಎಲೆಗಳನ್ನು ಸಂಧಿವಾತದಲ್ಲಿ ಬಳಸುತ್ತಾರೆ. ಅವುಗಳ ತಿಳಿರಸ ಅಪಸ್ಮಾರಕ್ಕೆ ಒಳ್ಳೆಯ ಔಷಧಿ. ಎಲೆಗಳನ್ನು ಕುದಿಸಿ ತೆಗೆದ ನೀರನ್ನು ಮುಕ್ಕಳಿಸುತ್ತಿದ್ದಲ್ಲಿ ಒಸಡುಗಳ ಊತ ಮತ್ತು ಹಲ್ಲು ನೋವು ತಗ್ಗುತ್ತದೆ.

ಸೀಬೆ ಮರದ ಎಲೆಗಳನ್ನು ಅರೆದು ಗಾಯ ಹಾಗೂ ವ್ರಣಗಳಿಗೆ ಪಟ್ಟು ಹಾಕುವುದುಂಟು.

# ಬೆಣ್ಣೆಯಲ್ಲಿರುವ ಆರೋಗ್ಯಕರ ಗುಣಗಳು



ಬೆಣ್ಣೆಯಲ್ಲಿರುವ ಕೊಬ್ಬಿನಂಶವಾದ ಗ್ಲೈಕೋಸ್ಫಿಂಗೊಲಿಪಿಡ್ಸ್ ಜಠರಕ್ಕೆ ಬ್ಯಾಕ್ಟಿರಿಯಾ ಸೋಂಕು ತಾಗದಂತೆ ರಕ್ಷಣೆ ಮಾಡುತ್ತದೆ. ದೇಹದಲ್ಲಿ ವಿಟಮಿನ್ ಎ ಕೊರತೆಯಿಂದ ಥೈರಾಯ್ಡ್ ಬರುತ್ತದೆ. ಆದರೆ ಬೆಣ್ಣೆಯಲ್ಲಿ ವಿಟಮಿನ್ ಎ ಅಧಿಕ ಇರುವುದರಿಂದ ಥೈರಾಯ್ಡ್ ಗ್ರಂಥಿ ಸರಿಯಾಗಿ ಕಾರ್ಯನಿರ್ವಹಿಸುವಂತೆ ಮಾಡುತ್ತದೆ. ಬೆಣ್ಣೆಯಲ್ಲಿ ವೂಲ್ಜನ್ ಫ್ಯಾಕ್ಟರ್ ಎಂಬ ಅಂಶವಿದ್ದು ಇದು ಮೂಳೆಗಳ ಆರೋಗ್ಯಕ್ಕೆ ತುಂಬಾ ಒಳ್ಳೆಯದು. ತುಪ್ಪ ಹಾಗೂ ಬೆಣ್ಣೆ ಎರಡೂ ಆರೋಗ್ಯಕರವಾದ ಆಹಾರವಾಗಿದ್ದು ಅದರಲ್ಲಿರುವ ಪೋಷಕಾಂಶಗಳು ತುಂಬಾ ಒಂದೇ ರೀತಿ ಇದೆ. ತುಪ್ಪ ಹಾಗೂ ಬೆಣ್ಣೆ ಅದರದೇ ಆದ ರುಚಿ ಹಾಗೂ ಆರೋಗ್ಯಕರ ಗುಣಗಳನ್ನು ಹೊಂದಿದ್ದು ಅವರ ಆರೋಗ್ಯಕ್ಕೆ ಯಾವುದು ಸರಿ ಅನಿಸುತ್ತದೆಯೋ ಅದನ್ನು ಬಳಸಬಹುದು. ಆದರೆ ಲ್ಯಾಕ್ಟೋಸ್ ಅಸಮತೋಲನ ಇರುವವರಿಗೆ ಬೆಣ್ಣೆಗಿಂತ ತುಪ್ಪ ಅತ್ಯುತ್ತಮವಾದ ಆಹಾರವಾಗಿದೆ. ಕೆಲವರಿಗೆ ಬೆಣ್ಣೆ ತಿಂದರೆ ಅಲರ್ಜಿ ಉಂಟಾಗುತ್ತದೆ. ಅದಕ್ಕೆ ಕಾರಣ ಅದರಲ್ಲಿರುವ ಲ್ಯಾಕ್ಟೋಸ್ ಅಂಶ. ಇದರಲ್ಲಿರುವ ಹಾಲಿನ ಪ್ರೊಟೀನ್ ಲ್ಯಾಕ್ಟೋಸ್ ಅಸಮತೋಲನ ಇರುವ ವ್ಯಕ್ತಿಯಲ್ಲಿ ಗುಳ್ಳೆಗಳು, ತುರಿಕೆ, ಅಸ್ತಮಾ ಉಲ್ಬಣವಾಗುವಂತಹ ತೊಂದರೆಗಳು ಕಾಣಿಸಿಕೊಳ್ಳುವುದು.

ಆದರೆ ತುಪ್ಪದಲ್ಲಿ ಹಾಲಿನ ಯಾವುದೇ ಪ್ರೊಟೀನ್ ಅಂಶವಿಲ್ಲದಿರುವ ಕಾರಣ ಲ್ಯಾಕ್ಟೋಸ್ ಅಸಮತೋಲನ ಇರುವವರಿಗೆ ತುಪ್ಪ ಒಳ್ಳೆಯದು.

# ಸರ್ವಮಂಗಳಾ ಹಿರೇಮಠರಿಗೆ ವೈದ್ಯ ಸದಾಶಿವ ಪ್ರಶಸ್ತಿ



**ರಬಕವಿ-ಬನಹಟ್ಟಿ :** ಸಮೀಪದ ಚಿಮ್ಮಡ ಗ್ರಾಮದ ಮಾಳಿಗಡ್ಡಿ ಶಾಲೆಯ ಮುಖ್ಯಾಧ್ಯಾಪಕಿ ಸರ್ವಮಂಗಳಾ ಹಿರೇಮಠರಿಗೆ ಬನಹಟ್ಟಿಯ ಮಕ್ಕಳ ಸಂಗಮವು ಪ್ರತಿಷ್ಠಾಪಿಸಿದ ಡಾ. ಸ. ಜ. ನಾಗಲೋಟಿಮಠ ಹೆಸರಿನ ವೈದ್ಯ ಸದಾಶಿವ ಉತ್ತಮ ಶಿಕ್ಷಕಿ ಪ್ರಶಸ್ತಿಯನ್ನು ನೀಡಲಾಗುವುದು ಎಂದು ಮಕ್ಕಳ ಸಂಗಮದ ಅಧ್ಯಕ್ಷ ಜಯವಂತ ಕಾಡದೇವರ ತಿಳಿಸಿದರು.

ಜುಲೈ 20 ರಂದು ಬನಹಟ್ಟಿ ಎಸ್. ಆರ್. ಎ. ಪದವಿ ಪೂರ್ವ ಕಾಲೇಜಿನಲ್ಲಿ ಪ್ರಶಸ್ತಿ ಪ್ರದಾನ ಕಾರ್ಯಕ್ರಮ ನಡೆಯಲಿದೆ. ಜನತಾ ಶಿಕ್ಷಣ ಸಂಘದ ಆಡಳಿತ ಮಂಡಳಿಯ ಸದಸ್ಯ ಶಂಕರ ಸೋರಗಾಂವಿ ಅಧ್ಯಕ್ಷತೆ ವಹಿಸಲಿದ್ದಾರೆ. ಸದಸ್ಯ ವಿ. ಆರ್. ಕುಳ್ಳಿ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ. ಪ್ರಾಚಾರ್ಯ ಬಿ. ಆರ್. ಗೊಡ್ಡಾಳೆ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

## ನಿಧನ ವಾರ್ತೆ

### ಆನಂದ ಲುಕ್ಕ



**ಬನಹಟ್ಟಿ :** ಇಲ್ಲಿಯ ಸೋಮವಾರ ಪೇಟೆಯ ಹೊರಟ್ಟಿ ಲೈನ್ ನಿವಾಸಿ ಆನಂದ ಲುಕ್ಕ ತಮ್ಮ 43 ನೆಯ ವಯಸ್ಸಿನಲ್ಲಿ ಜುಲೈ 15 ರಂದು ನಿಧನರಾದರು.

ಮೃತರು ತಮ್ಮ ಹಿಂದೆ ಪತ್ನಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

### ಗಿರಿಜಾ ಫಕೀರಪುರ



**ಬನಹಟ್ಟಿ :** ಸಮೀಪದ ಆಸಂಗಿ ಗ್ರಾಮದ ನಿವಾಸಿ ಗಿರಿಜಾ ಫಕೀರಪುರ ತಮ್ಮ 31 ನೆಯ ವಯಸ್ಸಿನಲ್ಲಿ ಜುಲೈ 15 ರಂದು ನಿಧನರಾದರು. ಮೃತರು ತಮ್ಮ ಹಿಂದೆ ಪತಿ, ಓರ್ವ ಪುತ್ರ, ಪುತ್ರಿ ಸೇರಿದಂತೆ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

### ಮಹಾದೇವಿ ಬು. ಕೋಲಿ



**ರಬಕವಿ :** ಇಲ್ಲಿಯ ಹಟಗಾರ ಸಮಾಜದ ಶ್ರೀಮತಿ ಮಹಾದೇವಿ ಬುದ್ದಪ್ಪ ಕೋಲಿ ಅವರು ಜುಲೈ 14 ರಂದು ನಿಧನರಾದರು.

# ಲೈನ್ಸ್ ಸಂಸ್ಥೆಯು ನಿಸ್ವಾರ್ಥ ಸೇವೆಗೆ ಹೆಸರಾಗಿದೆ: ಎಂ.ಜೆ ಎಫ್ ಲಾ. ಗುರುದೇವ ಸಿದ್ದಾಪುರಮಠ

**ಬಾಗಲಕೋಟೆ :** ವಿಶ್ವದಾದ್ಯಂತ ಲೈನ್ಸ್‌ಸಂಸ್ಥೆಯುನೂರುವರ್ಷಕ್ಕೂ ಹೆಚ್ಚುಕಾಲದಿಂದನಿಸ್ವಾರ್ಥಸೇವೆಗೆ ಹೆಸರಾಗಿದೆ, ಸೇವೆಯೊಂದಿಗೆ ಭ್ರಾತತ್ವ ಸ್ನೇಹವಯ ಮತ್ತು ಸಂಸ್ಕೃತಿಕವಾಗಿಯೂ ಕೂ ಡ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದು ಎಂ.ಜೆ ಎಫ್ ಲಾ. ಗುರುದೇವ ಸಿದ್ದಾಪುರಮಠ ಹೇಳಿದರು.

ನಗರದಲಯನ್ಸ್‌ಕ್ಲಬ್‌ಸಿವಿಸಿಹಾಲ್ ಏರ್ಪಡಿಸಿದ್ದ 2024-25 ನೇ ಸಾಲಿನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಭಾಗವಹಿಸಿ, ಪದಾಧಿಕಾರಿಗಳಿಗೆ ಪ್ರಮಾಣ ವಚನ ಬೋಧಿಸಿ ಮಾತನಾಡುತ್ತ.ಬಾಗಲಕೋಟೆ ಲಯನ್ಸ್ ಸಂಸ್ಥೆಯು ಕಳೆದ 53 ವರ್ಷಗಳಿಂದ ನಿಸ್ವಾರ್ಥವಾಗಿ ಉತ್ತಮ ಕಾರ್ಯಗಳನ್ನು ಮಾಡುವ ಮೂಲಕ ಜಿಲ್ಲೆಯಲ್ಲಿ ಮಾದರಿ ಕ್ಲಬ್ ಆಗಿದೆ ಎಂದರು.

ನಿರ್ಗಮಿತ ಅಧ್ಯಕ್ಷ ಲಾ. ಆನಂದ ಜಿಗಜಿನ್ನಿಯವರು ಮಾತನಾಡಿ ಲೈನ್ ಸಂಸ್ಥೆಯು ಬಾಗಲಕೋಟೆಯಲ್ಲಿ ನೂರಾರು ಕಾರ್ಯಕ್ರಮಗಳನ್ನ ಹಮ್ಮಿಕೊಂಡು ಸಮಾಜ ಸೇವೆಗೆ ತನ್ನದೇ ಆದ ಕೊಡುಗೆಯನ್ನು ನೀಡಿದೆ ಆದರೆ ಬಾಗಲಕೋಟ್ ಲೈನ್ಸ್ ಸಂಸ್ಥೆಯಿಂದ ಇದುವರೆಗೆ ಯಾರೊಬ್ಬರೂ ಜಿಲ್ಲಾ ಗವರ್ನರ್ ಆಗದಿರುವುದು ಖೇದಕರ ಬರುವ ದಿನಗಳಲ್ಲಿ ಎಲ್ಲಾ ಸದಸ್ಯರು ಸೇರಿ ಒಮ್ಮತದ ಅಭ್ಯರ್ಥಿಯನ್ನ ಆಯ್ಕೆ ಮಾಡಬೇಕಿದೆ ಎಂದರು.

ಅದೇ ರೀತಿ ಲಯನ್ಸ್ ಸಂಸ್ಥೆಯಲ್ಲಿ ಎಂದೆಂದಿಗೂ ರಾಜಕೀಯವನ್ನು ಬೆರೆಸಬೇಡಿ ಎಂದು ಸದಸ್ಯರಿಗೆ ಕಿವಿಮಾತು ಹೇಳಿದರು.

ನೂತನ ಅಧ್ಯಕ್ಷ ಲಾ. ಸಿದ್ದಣ್ಣ ಹಂಪನಗೌಡ ಅಧಿಕಾರ ಸ್ವೀಕರಿಸಿ ಮಾತನಾಡುತ್ತಾ ಉತ್ತಮ ವ್ಯಕ್ತಿತ್ವ ಬೆಳೆಸಿಕೊಳ್ಳಲು ಲಯನ್ಸ್ ಕ್ಲಬ್ ವೇದಿಕೆಯಾಗಿದೆ. ಸೇವೆ ಮಾಡಲು ಈ ಅವಕಾಶ ಸಿಕ್ಕಿದ್ದು ನನ್ನ ಪುಣ್ಯ




ಎಂದರು."ಬರುವ ದಿನಗಳಲ್ಲಿ ಆರೋಗ್ಯ ಉಚಿತ ತಪಾಸಣೆ, ಶಾಲಾ-ಕಾಲೇಜುಗಳಿಗೆ ಅಗತ್ಯ ಪರಿಕರಗಳನ್ನು ನೀಡುವುದು, ಅಂಗವಿಕಲರ ಶಾಲೆಗಳ ಅಭಿವೃದ್ಧಿಗೆ ಸಹಾಯ, ಮಹಿಳೆಯರಿಗೆ, ರೈತರಿಗೆ ವಿವಿದ ರೀತಿಯ ಕಾರ್ಯಕ್ರಮಗಳನ್ನ ಹಮ್ಮಿಕೊಳ್ಳುವ ಉದ್ದೇಶ ಹೊಂದಿರುವುದಾಗಿ ಅದಕ್ಕೆ ಎಲ್ಲಾ ಸದಸ್ಯರುಗಳ ಹಾಗೂ ಸಮಾಜದ ಸಹಕಾರ ಅತಿ ಮುಖ್ಯ ಎಂದು ಹೇಳಿದರು.2024-25ನೇಸಾಲಿನ ಕಾರ್ಯದರ್ಶಿಯಾಗಿ ವಿಶ್ವನಾಥ್ ಗುಳೇದ, ಖಜಾಂಚಿಯಾಗಿ ಹನುಮಂತ ದೊಡ್ಡಮನಿ ಮತ್ತು ಬ್ರಾಂಚ್ ಕ್ಲಬ್ಬಿನ ಅಧ್ಯಕ್ಷರಾಗಿ ಲಾ. ನೇಹಾ ಇಂಜಗನೇರಿ, ಕಾರ್ಯದರ್ಶಿಗಳಾಗಿ ಲಾಯನ್ ಉಮಾ ಪಟ್ಟಣಶೆಟ್ಟಿ ಪ್ರಮಾಣ ವಚನ ಸ್ವೀಕರಿಸಿದರು.

ವೇದಿಕೆಯ ಮೇಲೆ ವೀರೇಶ ರೋಣದ, ಮಲ್ಲಿಕಾರ್ಜುನ ಸಾಸನೂರ ಉಪಸ್ಥಿತರಿದ್ದರು. ಸಮಾರಂಭದಲ್ಲಿ ಅನೇಕ ಗಣ್ಯರು ನಾಲತ್ತವಾಡ ಗ್ರಾಮದ ಹಿರಿಯರು ಲಾಯನ, ರೋಟರಿ ಮತ್ತಿತರ ಸಂಸ್ಥೆಗಳ ಸದಸ್ಯರು ಹಾಗೂ ಬೇರೆ ಬೇರೆ ಲಯನ್ಸ್ ಕ್ಲಬ್ ಗಳಿಂದ ಆಗಮಿಸಿರುವ ಸದಸ್ಯರು ಭಾಗವಹಿಸಿದ್ದರು.

ಕೊನೆಗೆ ಕಾರ್ಯದರ್ಶಿ ಲಯನ್ ವಿಶ್ವನಾಥ ಗುಳೇದ ವಂದಿಸಿದರು. ಕಾರ್ಯಕ್ರಮವನ್ನು ಲಾ. ಸೀಮಾ ಮನ್ನೂರ ಮತ್ತು ಲಾ.ಡಾ. ಸುಚಿತ್ರ ವನಕಿ ನಿರೂಪಿಸಿದರು ಧ್ವಜಾರೋಹಣವನ್ನು ಎನ್‌ಸಿಸಿ ಕೆಡೆಟ್ಸ್ ನಡೆಸಿಕೊಟ್ಟರು.

# ಪತ್ರಕರ್ತರ ಅಕ್ಷರ ಬೇಸಾಯ ಸಮೃದ್ಧವಾಗಿದೆ: ಪ್ರೋ. ಗುಜಗೊಂಡ

**ಮೂಡಲಗಿ :** ಪತ್ರಿಕಾ ದಿನಾಚರಣೆಯನ್ನು ಆಚರಿಸುವದು 365 ದಿನಗಳ ಕಾಲ ಸಮಾಜ ಸೇವೆಯನ್ನು ಮಾಡಿದ ಪತ್ರಕರ್ತರನ್ನು ಗೌರವಿಸುವದು ಅಷ್ಟೇ ಅಲ್ಲ ಅವರ ಪರಿಶ್ರಮ, ತಾಕಲಾಟ,ಸುದ್ದಿ ಸಂಗ್ರಹಣೆಗಾಗಿ ಪರದಾಟದ ಜೊತೆಗೆ ತಮ್ಮ ಪರಿವಾರವನ್ನು ರಾತ್ರಿ ಸಮಯದಲ್ಲಿ ಒಂಟಿಯಾಗಿ ಬಿಟ್ಟು ಘಟನೆ ನಡೆದ ಸ್ಥಳಕ್ಕೆ ದೌಡಾಯಿಸುವ ಸಂದರ್ಭವನ್ನು ಮೇಲಕು ಹಾಕುವದು ಆಗಿದೆ ಎಂದು ಮೂಡಲಗಿ ಶಿಕ್ಷಣ ಸಂಸ್ಥೆಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಪ್ರೋ ಸಂಗಮೇಶ ಗುಜಗೊಂಡ ಹೇಳಿದರು,

ಸೋಮವಾರ ಮೂಡಲಗಿ ಶಿಕ್ಷಣ ಸಂಸ್ಥೆಯ ಹಾಗೂ ಅಂಗ ಸಂಸ್ಥೆಗಳ ಸಹಯೋಗದಲ್ಲಿ ಶ್ರೀ ಕಲ್ಮೇಶ್ವರಬೋಧ ಸಭಾ ಭವನದಲ್ಲಿ ನಡೆದ ಪತ್ರಿಕಾ



ದಿನಾಚರಣೆ ಹಾಗೂ ಪತ್ರಕರ್ತರಿಗೆ ಗೌರವ ಸನ್ಮಾನದ ಕಾರ್ಯಕ್ರಮದಲ್ಲಿ ಪ್ರಾಸ್ತಾವಿಕವಾಗಿ ಮಾತನಾಡಿದರು,

ಸಮಾಜದ ಮುಖವಾಣಿ ಪತ್ರಿಕೆ. ಪತ್ರಿಕೆ ಇಲ್ಲದೆ ಮುಂಜಾನೆ ಅಪೂರ್ಣ. ಪ್ರತಿಕೆ ಒದಿದ ಅನುಭವ ಯಾವ ತಂತ್ರಜ್ಞಾನದಿದಲ್ಲೂ ಸಿಗುವದಿಲ್ಲ, ವಿದ್ಯಾರ್ಥಿಗಳ ಸಾಧನೆಯ ಸುದ್ದಿ ಪ್ರಕಟವಾದರೆ ಆತನ ಸಾಧನೆಗೆ ಮತ್ತಷ್ಟು ಪ್ರೇರಣಾದಾಯಕಾಗುತ್ತದೆ ,ಮೂಡಲಗಿಯ ಪತ್ರಕರ್ತರು ಕ್ರೀಯಾಶೀಲರು ಇಲ್ಲಿಯ ಪತ್ರಿಕಾ ವರದಿಗಾರರ ಅಕ್ಷರ ಬೇಸಾಯ ರಾಜ್ಯದ ಮೂಲೆ ಮೂಲೆಗೂ ಬಿತ್ತರಿಸಿದೆ ಎಂದರೆ ಅತಿಸೋಕ್ತಿಯಾಗಲಾರದು, ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಅಜೀತ ಮನ್ನಿಕೇರಿ ಮಾತನಾಡಿ. ಪತ್ರಕರ್ತರು ವಿದ್ಯಾರ್ಥಿಗಳು ಒಂದೆ, ಇಬ್ಬರು ಹೊಸ ಹೊಸ ವಿಷಯವನ್ನು ಹುಡುಕುತ್ತಾರೆ, ಇಬ್ಬರು ವಿಷಯ ಸಂಗ್ರಹಿಸುತ್ತಾರೆ ಅದನ್ನು ಯಾವ ತರಹದಲ್ಲಿ ಸಮಾಜದ ಮುಂದೆ ಶಿಕ್ಷಕರ ಮುಂದೆ ವಿನೂತವಾಗಿ ಪ್ರಸ್ತುತ ಪಡಿಸುವಲ್ಲಿ ತಮ್ಮ ಕಲಾ ಕೌಶಲ್ಯವನ್ನು ತೊರಿಸಬೇಕಾಗುತ್ತದೆ. ಇದರಲ್ಲಿ ವಿಧ್ಯಾರ್ಥಿ ಹಾಗೂ ಪತ್ರಕರ್ತರ ನೈಪುಣ್ಯತೆಯನ್ನು ಅಡಗಿದೆ. ಯಾವ ವಿಷಯವನ್ನುಸಮಾಜದ ಮುಂದೆ ಪ್ರಸ್ತುತ ಪಡಿಸಬೇಕು ಎಂಬ ವಿಷಯ ಪತ್ರಕರ್ತರ ಅಡಗಿದಂತೆ ವಿದ್ಯಾರ್ಥಿಗಳು ಶಿಕ್ಷಕರ ಮುಂದೆ ವಿಷಯ ತೊರಿಸುವಾಗ ಅವರ ಜಾಣ್ಮೆಯನ್ನು ಪ್ರದರ್ಶಿಸಬೇಕಾಗುತ್ತದೆ ಎಂದರು.

ಅದ್ಯಕ್ಷತೆ ವಹಿಸಿದ ವೆಂಕಟೇಶ ಸೋನವಾಲ್ಕರ ಮಾತನಾಡಿ. ಪತ್ರಕರ್ತರು ಸಮಾಜದ ಮುಖ್ಯ ಭಾಗ ಅವರ ಸಾಧನೆ ನಿರಂತರವಾಗಿರಲಿ. ವಿದ್ಯಾರ್ಥಿಗಳು ಛಲ ಮತ್ತು ಸಾಧಿಸುವ ನಿರಂತರ ಕಾಯಕ ಯಾವಾಗಲು ನೀಮ್ಮದಾಗಲಿ ಎಂದು ಹಾರೈಸಿದರು. ಕರೋನಾ ಸಮಯದಲ್ಲಿ ಪತ್ರಕರ್ತರ ಪಾತ್ರ ಬಹಳ ಅನನ್ಯವಾಗಿತ್ತು ಹಾಗೇಯೇ ಮೂಡಲಗಿಯಲ್ಲಿ ಆಗಬೇಕಾದ ಕಾರ್ಯಗಳು ಇವೆ ಅದರ ಬಗ್ಗೆ ಕಾಳಜಿವಹಿಸಿ ಎಂದರು.

ನಿವೃತ್ತ ಗ್ರಂಥಪಾಲಕ ಬಾಲಶೇಖರ ಬಂದಿ. ನ್ಯಾಯವಾದಿ ಲಕ್ಷ್ಮಣ ಅಡಿಹುಡಿ ಮಾತಮಾಡಿದರು.

ಡಾ ಎಸ್ ಎಲ್ ಚಿತ್ರಗಾರ ನಿರೂಪಿಸಿದರು .ಪದವಿ ಪೂರ್ವ ಮಹಾವಿದ್ಯಾಲಯದ ಪ್ರಾಚಾರ್ಯ ಎಮ್ ಎಸ್ ಪಾಟೀಲ ವಂದಿಸಿದರು.

# ಗೃಹಲಕ್ಷ್ಮೀ ಯೋಜನೆಯಡಿ ಅರ್ಜಿ ಸಲ್ಲಿಸಲು ಲಿಂಗತ್ವ ಅಲ್ಪಸಂಖ್ಯಾತರಿಗೆ ಅವಕಾಶ

**ಕೊಪ್ಪಳ :** ಗೃಹಲಕ್ಷ್ಮೀ ಯೋಜನೆಯಡಿ ಲಿಂಗತ್ವ ಅಲ್ಪಸಂಖ್ಯಾತರು ಅರ್ಜಿ ಹಾಕಲು ಸರ್ಕಾರ ಆದೇಶಿಸಿದ ಹಿನ್ನೆಲೆಯಲ್ಲಿ ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕೊಪ್ಪಳ ಕಛೇರಿಗೆ ಮೊದಲ ದಿನವೇ 12 ಜನ ಲಿಂಗತ್ವ ಅಲ್ಪಸಂಖ್ಯಾತರು ಗೃಹಲಕ್ಷ್ಮೀ ಯೋಜನೆಯಡಿ ಅರ್ಜಿ ಸಲ್ಲಿಸಿರುತ್ತಾರೆ.

National Portal for Transgender persons ಪೋರ್ಟಲ್ ಮೂಲಕ ಜಿಲ್ಲಾಧಿಕಾರಿಗಳಿಂದ ದೃಢೀಕರಿಸಲ್ಪಟ್ಟ ಲಿಂಗತ್ವ ಅಲ್ಪಸಂಖ್ಯಾತ ವ್ಯಕ್ತಿಗಳು ಮತ್ತು ಲಿಂಗತ್ವ ಅಲ್ಪಸಂಖ್ಯಾತ ಸಮುದಾಯದವರು ಗೃಹಲಕ್ಷ್ಮೀ ಯೋಜನೆಯಡಿ ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಟ್ರಾನ್ಸ್‌ಜೆಂಡರ್ ಗುರುತಿನ ಚೀಟಿ, ಪಾಸ್‌ಪೋರ್ಟ್ ಅಳತೆಯ ಫೋಟೋ ಮತ್ತು ಆಧಾರ್ ಕಾರ್ಡ್‌ನ್ನು ಕಡ್ಡಾಯವಾಗಿ ಸಲ್ಲಿಸಬೇಕು. ಕೊಪ್ಪಳ ಜಿಲ್ಲೆಯ ಎಲ್ಲಾ ಲಿಂಗತ್ವ ಅಲ್ಪಸಂಖ್ಯಾತರು ಈ ಯೋಜನೆಯಡಿ ನಿರ್ಭಯವಾಗಿ ಅರ್ಜಿ ಸಲ್ಲಿಸಿ ಯೋಜನೆಯ ಸದುಪಯೋಗ ಪಡೆದುಕೊಳ್ಳುವಂತೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಯಿ ಸಂಭ್ರಮ 24-25: ವಿದ್ಯಾರ್ಥಿಗಳ ಶಿಕ್ಷಣವೇ ಮಹತ್ವ ಘಟ್ಟ ಮಂಜುನಾಥ ಶ್ರೀಗಳು

**ಮೂಡಲಗಿ :** ಪ್ರತಿ ವಿದ್ಯಾರ್ಥಿಗಳ ತಮ್ಮ ಜೀವನದ ಮಹತ್ವದ ಘಟ್ಟವೇ ಶಿಕ್ಷಣ ಎಂಬುದನ್ನು ಅರ್ಥ ಮಾಡಿಕೊಂಡು ಮುಂದಿನ ಉಜ್ವಲದ ಹಾದಿಯನ್ನು ತುಳಿಯಬೇಕು ಎಂದು ಹುಕ್ಕೇರಿ - ಶ್ರೀ ಕ್ಷೇತ್ರ ಕ್ಯಾರಗುಡ್ಡ ಮಠದ ಅಭಿನವ ಮಂಜುನಾಥ ಮಹಾಸ್ವಾಮೀಜಿ ಹೇಳಿದರು.

ಶನಿವಾರ ಈರಣ್ಣ ದೇವಸ್ಥಾನದ ಕೆ.ಎಚ್. ಸೋನವಾಲಕರ ಕಲ್ಯಾಣ ಮಂಟಪದಲ್ಲಿ ಜರುಗಿದ ಸಾಯಿ ವಿಜ್ಞಾನ ವಾಣಿಜ್ಯ ಹಾಗೂ ಕಲಾ ಪದವಿ ಪೂರ್ವ ಮಹಾವಿದ್ಯಾಲಯದ 24-25 ಸಾಲಿನ ಸಾಂಸ್ಕೃತಿಕ ಹಾಗೂ ಕ್ರೀಡಾ ಚಟುವಟಿಕೆಗಳ ಉದ್ಘಾಟನೆ ಪ್ರಥಮ ವರ್ಷದ ಪಿಯು ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಸಾನ್ನಿಧ್ಯ ವಹಿಸಿ ಮಾತನಾಡಿದರು,



ಹಳ್ಳಿ ಹಳ್ಳಿಗಳಲ್ಲಿಯೋ ತಂತ್ರಜ್ಞಾನದ ಸಹಾಯದಿಂದ ಉತ್ತಮ ವಿದ್ಯೆ ಲಭ್ಯವಾಗುತ್ತಿದ್ದು ಮಕ್ಕಳು ಈ ಸೌಲಭ್ಯಗಳನ್ನು ಬಳಸಿಕೊಂಡು ಉತ್ತಮ ವಿದ್ಯಾವಂತರ ಜೊತೆಗೆ ಒಳೆಯ ಸಂಸ್ಕಾರ ಪಡೆಯಿರಿ ಎಂದರು,

ಪೋಲಿಸ ವೃತ್ತ ನಿರಿಕ್ಷಕ ಶ್ರೀಶೈಲ ಬ್ಯಾಕೋಡ ಮಾತನಾಡಿ, ವಿಧ್ಯೇ ಲಭಿಸಬೇಕಾದರೆ ಅತಂತ್ಯ ಕಠಿಣ ಪರಿಶ್ರಮ, ನಿರಂತರ ಓದು, ಏಕಾಗ್ರತೆ ಅವಶ್ಯವಾಗಿದೆ ಇವುಗಳ ಸಾಧಕರು ಉತ್ತಮ ವಿದ್ಯಾರ್ಥಿಗಳಾಗುತ್ತಾರೆ ಎಂದರು, ಅಧ್ಯಕ್ಷತೆವಹಿಸಿದ್ದಸಂಸ್ಥೆಯಅಧ್ಯಕ್ಷ ಪುಲಕೇಶ ಆರ್.ಸೋನವಾಲಕರ ಮಾತನಾಡಿದರು.

ಮೂಡಲಗಿ ವೈದ್ಯ ಡಾ॥ ಮಹಾಂತೇಶ ಗಾಣಿಗೇರ, ಜಿ.ಪಂ ಸದಸ್ಯ ಗೋವಿಂದ ಕೊಪ್ಪದ ಮತ್ತು ಕೌಜಲಗಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಶಿಕ್ಷಕ ಎನ್.ಜಿ.ಯರಗಟ್ಟಿ ಮಾತನಾಡಿದರು.

ವೇದಿಕೆಯಲ್ಲಿ ನಾಗನೂರ ಮಹಾಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಬಸನಗೌಡ ಆರ್.ಪಾಟೀಲ, ಹಳ್ಳೂರಿನ ಹಣಮಂತ ತೇರದಾಳ, ಸಂಸ್ಥೆಯ ನಿರ್ದೇಶಕಿ ಅನುರಾಧ ಮಟ್ಟಿಕಲ್ಲಿ, ದಯಾನಂದ ಮಟ್ಟಿಕಲ್ಲಿ, ಉಪಸ್ಥಿತರಿದ್ದರು

ಇದೆ ಸಮಾರಂಭದಲ್ಲಿ ದ್ವಿತೀಯ ಪಿಯುಸಿ ಪರಿಕ್ಷೆಯಲ್ಲಿ ಉತ್ತಮ ಸಾಧನೆಮಾಡಿದವಿದ್ಯಾರ್ಥಿಗಳನ್ನು ಹಾಗೂ ಕಾಲೇಜಿನ ಹಳೇ ವಿದ್ಯಾರ್ಥಿಗಳನ್ನು ಸತ್ಕರಿಸಿ ಗೌರವಿಸಲಾಯಿತು.

ಕಾಲೇಜಿನ ಪ್ರಾಚಾರ್ಯ ಪ್ರವೀಣ ಕುಲಗೋಡ ಸ್ವಾಗತಿ ಪ್ರಾಸ್ತಾವಿಕವಾಗಿಮಾತನಾಡಿದರು, ಉಪನ್ಯಾಸಕ ಎಸ್.ಬಿ.ಬಡಿಗೇರ ನಿರೂಪಿಸಿದರು, ಮಹೇಶ ಮಾಳಿ ವಂದಿಸಿದರು.

# ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಆಯ್ಕೆ ಸಮಿತಿ ರಚನೆ: ಪ್ರಶಸ್ತಿಗೆ ನಾಮ ನಿರ್ದೇಶನಗಳ ಆಹ್ವಾನ

**ಕೊಪ್ಪಳ :** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ 2019ನೇ ಕ್ಯಾಲೆಂಡರ್ ವರ್ಷದಿಂದ 2023ನೇ ಕ್ಯಾಲೆಂಡರ್ ವರ್ಷಗಳಿಗೆ ಟಿಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ ಹಾಗೂ ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿಗಳಿಗೆ ಆಯ್ಕೆ ಸಮಿತಿ ರಚಿಸಲಾಗಿದ್ದು, ಪ್ರಶಸ್ತಿಗೆ ನಾಮ ನಿರ್ದೇಶನಗಳನ್ನು ಆಹ್ವಾನಿಸಲಾಗಿದೆ.

**ಆಯ್ಕೆ ಸಮಿತಿ :**
ಹೈಕೋರ್ಟ್ ನಿವೃತ್ತ ನ್ಯಾಯಾಧೀಶರಾದ ಪಿ.ಎನ್. ದೇಸಾಯಿ ಅವರ ಅಧ್ಯಕ್ಷತೆಯ ಆಯ್ಕೆ ಸಮಿತಿಯಲ್ಲಿ ಹಿರಿಯ ಪತ್ರಕರ್ತರಾದ ಡಾ.ಈಶ್ವರ ದೈತೋಟ, ಶಾಂತಲಾ ಧರ್ಮರಾಜ್ ಹಾಗೂ ಎಂ.ಎಸ್.ಮಣಿ ಸದಸ್ಯರಾಗಿದ್ದಾರೆ. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರು ಸದಸ್ಯ ಕಾರ್ಯದರ್ಶಿಗಳಾಗಿರುತ್ತಾರೆ.

**ಟಿಯೆಸ್ಸಾರ್ ಸ್ಮಾರಕ ಪತ್ರಿಕೋದ್ಯಮ ಪ್ರಶಸ್ತಿ :**
ಕನ್ನಡದ ಹಿರಿಯ ಪರ್ತಕರ್ತ ಟಿ.ಎಸ್. ರಾಮಚಂದ್ರರಾವ್ ಅವರ ನೆನಪಿನಲ್ಲಿ ಸರ್ಕಾರ ಟಿಯೆಸ್ಸಾರ್ ಪ್ರಶಸ್ತಿ ನೀಡುತ್ತಾ ಬಂದಿದೆ. ಪ್ರಶಸ್ತಿಯ ಮೊತ್ತ 2 ಲಕ್ಷ ರೂ. ಆಗಿದ್ದು, ಕನ್ನಡ ಪತ್ರಿಕೋದ್ಯಮ, ಮುದ್ರಣ ಹಾಗೂ ವಿದ್ಯುನ್ಮಾನ ಮಾಧ್ಯಮದಲ್ಲಿ ಅಥವಾ ಎರಡರಲ್ಲೂ ಒಟ್ಟಿಗೆ ಕನಿಷ್ಠ 30 ವರ್ಷಗಳ ಸೇವೆ ಸಲ್ಲಿಸಿರುವ ಜೊತೆಗೆ ಕನ್ನಡ ಕ್ಷೇತ್ರಕ್ಕೆ ಭಾಷೆಯ ಬೆಳವಣಿಗೆಗೆ ವಿಶೇಷ ಕೊಡುಗೆ ನೀಡಿರುವವರನ್ನು ಪ್ರಶಸ್ತಿಗೆ ಪರಿಗಣಿಸಲಾಗುವುದು. ಪ್ರತಿ ಕ್ಯಾಲೆಂಡರ್ ವರ್ಷಕ್ಕೆ ಒಬ್ಬರಿಗೆ ಮಾತ್ರ ಈ ಪ್ರಶಸ್ತಿಯನ್ನು ನೀಡಲಾಗುವುದು.

**ಮೊಹರೆ ಹಣಮಂತರಾಯ ಪತ್ರಿಕೋದ್ಯಮ ಪ್ರಶಸ್ತಿ :**
ಪತ್ರಿಕಾ ರಂಗದ ಭೀಷ್ಮರೆಂದೇ ಹೆಸರಾದ ಮೊಹರೆ ಹಣಮಂತರಾಯ ಅವರ ನೆನಪಿನಲ್ಲಿ ಸರ್ಕಾರವು ಪ್ರಶಸ್ತಿ ನೀಡುತ್ತಾ ಬಂದಿದೆ. ಪ್ರಶಸ್ತಿಯ ಮೊತ್ತವು 2 ಲಕ್ಷ ರೂ. ಆಗಿದ್ದು, ಕನ್ನಡದ ಪತ್ರಿಕೋದ್ಯಮ ಕ್ಷೇತ್ರದಲ್ಲಿ ಯಾವುದೇ ಪತ್ರಿಕೆಯನ್ನು ಅಥವಾ ಪತ್ರಿಕಾ ಸಮೂಹವನ್ನು ಸಮರ್ಥವಾಗಿ ಕಟ್ಟಿ ಬೆಳೆಸಿದ ಹಾಗೂ ಪ್ರವೃತ್ತಿಯಲ್ಲಿ ಪತ್ರಕರ್ತರಾಗಿ, ವೃತ್ತಿಯಲ್ಲಿ ಪತ್ರಿಕಾಲಯದ ಮಾಲೀಕರು, ಆಡಳಿತಗಾರರಾಗಿ ಕನಿಷ್ಠ 30 ವರ್ಷ ಸೇವೆ ಸಲ್ಲಿಸಿರಬೇಕು.

ಪ್ರಶಸ್ತಿಗಳಿಗೆ ನಾಮನಿರ್ದೇಶನಗಳನ್ನು, ಮಾಧ್ಯಮ ಸಂಸ್ಥೆಗಳು ಹಾಗೂ ಇತರೆ ಸಂಘ ಸಂಸ್ಥೆಗಳು ಮತ್ತು ವ್ಯಕ್ತಿಗಳು ಪೂರ್ಣ ದಾಖಲೆಗಳೊಂದಿಗೆ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಾರ್ತಾಸೌಧ, ನಂ. 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು-560 001 ಇಲ್ಲಿಗೆ 2024ನೇ ಜುಲೈ 25ರ ಸಂಜೆ 5.30 ಗಂಟೆ ಒಳಗಾಗಿ ಕಳುಹಿಸಿಕೊಡಬಹುದಾಗಿದೆ. ಅಥವಾ ಜಿಲ್ಲಾ ವಾರ್ತಾಧಿಕಾರಿಗಳ ಕಚೇರಿ ಮೂಲಕ ಇಲ್ಲವೇ tsraward@gmail.com ಇಮೇಲ್ ವಿಳಾಸಕ್ಕೆ ಕೊನೆಯ ದಿನಾಂಕದೊಳಗೆ ಕಳುಹಿಸಿಕೊಡಬಹುದಾಗಿದೆ ಎಂದು ಎಂದು ಕೊಪ್ಪಳ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಗವಿಸಿದ್ದಪ್ಪ ಹೊಸಮನಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಗೇಶ ಸುಂಕದ ಸಿ.ಎ. ತೇರ್ಗಡೆ



**ಬನಹಟ್ಟಿ:**ಇಲ್ಲಿಯನಾಗೇಶಶ್ರೀಶೈಲ ಸುಂಕದ ಇವರು ಮೇ 2024 ರಲ್ಲಿ ಜರುಗಿದ ಸಿ. ಎ. ( ಚಾರ್ಟರ್ಡ್ ಅಕೌಂಟೆಂಟ್ಸ್ ) ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ಉತ್ತೀರ್ಣರಾಗಿದ್ದಾರೆ.ಆಮೂಲಕ ಪಟ್ಟಣದ ಕೀರ್ತಿ ಹೆಚ್ಚಿಸಿದ್ದು , ಈ ಸಾಧನೆಗೆ ಸಿದಗಿರೆಪ್ಪ ಸುಂಕದ, ಮಹಾಂತಯ್ಯ ಹಿರೇಮಠ, ಶಿವಾನಂದಗುಂಡಿ,ರಾಜುಗುಂಡಿ, ಆದರಗಿ ಸೇರಿದಂತೆ ಅನೇಕರು ಹರ್ಷ ವ್ಯಕ್ತಪಡಿಸಿದ್ದಾರೆ.

# ಮಹಿಳಾ ಮೋರ್ಚಾ ಉಪಾಧ್ಯಕ್ಷರಾಗಿ ಡಾ. ತುಂಗಳ ನೇಮಕ




**ಜಮಖಂಡಿ :** ನಗರದ ಜಿಲ್ಲಾ ಮಹಿಳಾ ಮೋರ್ಚಾ ಉಪಾಧ್ಯಕ್ಷ, ಸ್ತ್ರೀರೋಗ ತಜ್ಞೆ ಡಾ. ವಿಜಯಲಕ್ಷ್ಮೀ ತುಂಗಳ ಅವರು ಬಿಜೆಪಿ ರಾಜ್ಯ ಮಹಿಳಾ ಮೋರ್ಚಾ ರಾಜ್ಯ ಉಪಾಧ್ಯಕ್ಷರಾಗಿ ನೇಮಕ ಮಾಡಲಾಗಿದೆ ಎಂದು ರಾಜ್ಯ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷ ಸಿ.ಮಂಜುಳಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಪದಾಧಿಕಾರಿಗಳ ನೇಮಕ ಪ್ರಟಕಗೊಂಡ ನಂತರ ಬೆಂಗಳೂರಿಗೆ ತೆರಳಿದ ಸ್ತ್ರೀರೋಗ ತಜ್ಞೆ ಡಾ. ವಿಜಯಲಕ್ಷ್ಮೀ ತುಂಗಳ ರಾಜ್ಯ ಮಹಿಳಾ ಮೋರ್ಚಾ ರಾಜ್ಯಾಧ್ಯಕ್ಷ ಸಿ.ಮಂಜುಳಾ ಸನ್ಮಾನಿಸುವ ಮೂಲಕ ಸಂಘಟನೆ ಬಲಿಷ್ಠಗೊಳಿಸುವಂತೆ ಪಾರದರ್ಶಕವಾಗಿ ಬಿಜೆಪಿ ಪಕ್ಷದ ಸೇವೆ ಮಾಡುವಂತೆ ಸೂಚನೆ ನೀಡಿದ್ದಾರೆ.

# ಪಂಢರಪೂರಕ್ಕೆ ತೆರಳಿದ ಶಿರೋಳ-ಮುಧೋಳ ಭಕ್ತರು



**ಜಮಖಂಡಿ :** ಮಹಾರಾಷ್ಟ್ರದ ಸುಕ್ಷೇತ್ರ ಪಂಢರಪೂರದ ಆಷಾಢ ಏಕಾದಶಿ ನಿಮಿತ್ತ ಮುಧೋಳ ತಾಲೂಕಿನ ಶಿರೋಳ ಮತ್ತು ಮುಧೋಳ ನಗರದ ನೂರಾರು ಭಕ್ತರು ಪಾದಯಾತ್ರೆ ಮೂಲಕ ತೆರಳಿದರು.

ನಗರದ ಅಪ್ಪಾಸಾಹೇಬ ವಿಠ್ಠಲ ಮಂದಿರದಲ್ಲಿ ವಾಸ್ತವ್ಯ ಹೂಡಿದ್ದ ಭಕ್ತರು ಬೆಳಗಿನ ಜಾವ ಪೂಜಾ ವಿಧಾನದ ನಂತರ ಎತ್ತಿನ ಬಂಡಿಯಲ್ಲಿ ವಿಠ್ಠಲ ಮೂರ್ತಿಯೊಂದಿಗೆ ನಗರದ ಪ್ರಮುಖ ರಸ್ತೆಗಳಲ್ಲಿ ಸಂಚರಿಸುವ ಮೂಲಕ ಪಂಢರಪೂರಕ್ಕೆ ಯಾತ್ರಾರ್ಥಿಗಳು ತೆರಳಿದರು. ಚಿಕ್ಕಮಕ್ಕಳು, ಪುರಷರು ಮತ್ತು ಮಹಿಳೆಯರು ಪಾಲ್ಗೊಂಡಿದ್ದರು.

"SIHI KAHI" Kannada Daily Morning, Editor, Owner, Publisher, Printer by **MARUTI BASAVANTAPPA HOASAMANI** Published from Chittaragi Cross, S.C. Colony, Ward No. 9, Amingada-587112, Tq. Hungund Dist : Bagalkot, Karnataka and Printed at **SUDIN PRINTERS**, Sector No. 33, Shop No. 38 & 40, Opp. Ambedkar Bhavan, **NAVANAGAR, BAGALKOT-587 101.** Dist : Bagalkot, Karnataka State